ವಿಜಯಪುರ | ಸಂಪುಟ 04 | ಸಂಚಿಕೆ 070 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಮೇ, 02, 2026



"ಜಿಲ್ಲೆಯ 400 ಹಳ್ಳಿಗಳಲ್ಲಿ ಬಾಂದಾರ ನಿರ್ಮಾಣ ಕಾರ್ಯವನ್ನು ಹಂತ-ಹಂತವಾಗಿ ಮಾಡಲಾಗುವುದು. ತನ್ಮೂಲಕ ಇಡೀ ವಿಜಯಪುರ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸಿ, ದೇಶಕ್ಕೆ ಮಾದರಿಯಾಗುವ ಕಾರ್ಯ ಮಾಡುವೆ."

■ ಡಾ. ಎಂ.ಬಿ.ಪಾಟೀಲ
ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು

# ಲಕ್ಷಾಂತರ ಹೆಕ್ಟೇರ್ ಭೂಮಿಗೆ ನೀರು ಹರಿಸಿದ ಸಚಿವ ಎಂ.ಬಿ.ಪಾಟೀಲ

## ಸಚಿವ ಎಂ.ಬಿ. ಪಾಟೀಲರಿಗೆ ಲೋಹಗಾಂವ ಗ್ರಾಮಸ್ಥರಿಂದ ಅದ್ದೂರಿ ಸನ್ಮಾನ | ಜೋಡೆತ್ತಿನ ಬಂಡಿಯಲ್ಲಿ ಮೆರವಣಿಗೆ, ತುಲಾಭಾರ | ಸಚಿವ ಬೋಸರಾಜು ಶ್ಲಾಘನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಅನ್ನದಾತರ ಆಶೋತ್ತರಗಳಿಗೆ ಸ್ಪಂದಿಸಿ, ಜಲ ಸಂಪನ್ಮೂಲಗಳ ಪುನಶ್ಚೇತನಕ್ಕೆ ಬದ್ಧತೆ ತೋರಿದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅವರಿಗೆ ಲೋಹಗಾಂವ ಗ್ರಾಮಸ್ಥರು ಎತ್ತಿನ ಬಂಡಿಯಲ್ಲಿ ತುಲಾಭಾರ ಮಾಡುವ ಮೂಲಕ ತಮ್ಮ ಅಪಾರ ಅಭಿಮಾನ ಹಾಗೂ ಕೃತಜ್ಞತೆ ಸಲ್ಲಿಸಿದರು.

ಸಣ್ಣ ನೀರಾವರಿ ಇಲಾಖೆಯ ವತಿಯಿಂದ ವಿವಿಧ ಗ್ರಾಮಗಳಲ್ಲಿ ಕೋಟ್ಯಂತರ ರೂಪಾಯಿ ವೆಚ್ಚದ ಸರಣಿ ಬಾಂದಾರ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಿದ ಸಂದರ್ಭದಲ್ಲಿ ರೈತರು ಭಾವನಾತ್ಮಕವಾಗಿ ಸಚಿವರನ್ನು ಸನ್ಮಾನಿಸಿ ಸಮಾಧಾನದ ನಿಟ್ಟುಸಿರು ಬಿಟ್ಟರು.


17 ಕೋಟಿಗೂ ಅಧಿಕ ವೆಚ್ಚದ ಕಾಮಗಾರಿಗಳಿಗೆ ಚಾಲನೆ:

ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಬೋಸರಾಜು ಅವರೊಂದಿಗೆ ಸಚಿವರು ಜಿಲ್ಲೆಯ ವಿವಿಧೆಡೆ ಅಭಿವೃದ್ಧಿ ಕೆಲಸಗಳಿಗೆ ಶಂಕುಸ್ಥಾಪನೆ ನೆರವೇರಿಸುವ ಮೂಲಕ ರೈತರ ಸಂತಸದ ಹೊನಲನ್ನು ಇಮ್ಮಡಿಗೊಳಿಸಿದರು.

ಬರಟಗಿ ಗ್ರಾಮದಲ್ಲಿ 734 ಲಕ್ಷ ರೂ. ವೆಚ್ಚದಲ್ಲಿ ಅರಕೇರಿ, ಬರಟಗಿ ಮತ್ತು ಹಂಚಿನಾಳ ಪಿ.ಎಚ್ ಗ್ರಾಮಗಳ ಅಭಿವೃದ್ಧಿ ಕಾಮಗಾರಿಗೆ ಚಾಲನೆ ಕೊಡಿಸಿದರು.

ಲೋಹಗಾಂವ: 978 ಲಕ್ಷ ರೂ. ವೆಚ್ಚದಲ್ಲಿ ಲೋಹಗಾಂವ, ಟಕ್ಕಳಕಿ, ಹುಬನೂರ, ಜಾಲಗೇರಿ, ಇಟ್ಟಂಗಿಹಾಳ ಹಾಗೂ ಸಿದ್ಧಾಪೂರ ಗ್ರಾಮಗಳಲ್ಲಿ ಸರಣಿ ಬಾಂದಾರಗಳ ನಿರ್ಮಾಣ ಕಾರ್ಯಕ್ಕೆ ಚಾಲನೆ ಕೊಡಿಸಿದ್ದು, ಈ ಗ್ರಾಮಸ್ಥರಲ್ಲಿ ಹರ್ಷವನ್ನುಂಟು ಮಾಡಿತು. ಅಂತರ್ಜಲ ವೃದ್ಧಿ: ರೈತರ ಮೊಗದಲ್ಲಿ ಮಂದಹಾಸ :ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಸರಣಿ ಬಾಂದಾರಗಳ ನಿರ್ಮಾಣದಿಂದ ಈ ಭಾಗದ ಅಂತರ್ಜಲ ಮಟ್ಟ ಗಣನೀಯವಾಗಿ ಹೆಚ್ಚಲಿದೆ. ಇದರಿಂದ ಹಳ್ಳ-ಕೊಳ್ಳಗಳು ತುಂಬಿ ತುಳಕುತ್ತವೆ. ಬಾವಿ ಮತ್ತು ಕೊಳವೆ ಬಾವಿಗಳಲ್ಲಿ ನೀರಿನ ಲಭ್ಯತೆ ಸುಧಾರಿಸಿ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದರು.






ಕೇವಲ ಕೃಷಿಯಷ್ಟೇ ಅಲ್ಲದೆ, ಬೇಸಿಗೆಯ ಕಠಿಣ ಸಮಯದಲ್ಲಿ ಪಶು-ಪಕ್ಷಿಗಳಿಗೂ ಕುಡಿಯುವ ನೀರು ಸಿಗುವಂತಾಗಬೇಕಿರುವುದು ನಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಸಚಿವರು ತಿಳಿಸಿದಾಗ ನೆರೆದ ಜನತೆಯಿಂದ ಭರ್ತಿ ಕರತಾಡನ ಕೇಳಿಬಂತು.

ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ. ಪಾಟೀಲರು ಲೋಕಸಭಾ ಸದಸ್ಯರಾಗಿ, ಸಚಿವರಾಗಿ ಈ ಭಾಗದ ಅಭಿವೃದ್ಧಿ ಬಗ್ಗೆ ಜನರ ಬಗ್ಗೆ ಅಪಾರ ಕಾಳಜಿವಹಿಸಿದ್ದಾರೆ ಎಂದು ಬಣ್ಣಿಸಿದರು.

ಕೆರೆ ತುಂಬಿಸಲು ಈ ಭಾಗದ ಜನರಿಗೆ ಅನೇಕ ನ್ಯಾಯಾಂಗ ಸಮಸ್ಯೆಗಳಿದ್ದರೂ, ಅವುಗಳನ್ನೆಲ್ಲ ನಿವಾರಿಸುವ ಮೂಲಕ ಲಕ್ಷಾಂತರ ಹೆಕ್ಟೇರ್ ಭೂಮಿಗೆ ನೀರು ಹರಿಸಿದ ಅವರ ಪ್ರಯತ್ನಕ್ಕೆ ಅವರೇ ಸಾಟಿಯಾಗಿದ್ದಾರೆ ಎಂದು ಗುಣಗಾನ ಮಾಡಿದರು.

ದೇಶಕ್ಕೆ ಅಂತರ್ಜಲ ಮಾದರಿ:ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಮಾತನಾಡಿ, ಲೋಗಾಂವಿಯಲ್ಲಿ ಕೆರೆ ತುಂಬುವ ಯೋಜನೆ ಮಾಡಿದಾಗ

ಮತ್ತೊಂದು ಯೋಜನೆ ಅನುಷ್ಠಾನಗೊಳಿಸುವ ಸಂಕಲ್ಪ ಮಾಡಿದ್ದೆ. ಈಗ ಅದುವೇ ಹಳ್ಳ-ಕೊಳ್ಳಗಳನ್ನು ತುಂಬುವ ಮಹತ್ವಾಕಾಂಕ್ಷಿ ಯೋಜನೆಯಾಗಿದೆ ಎಂದರು. ನೀರಾವರಿ ಸಚಿವನಾಗಿದ್ದಾಗ ನೀರಾವರಿ ಕೆನಾಲ್ ಜಾಲದ ಮೇಲೆ 176 ಹಳ್ಳಗಳು ಬರುತ್ತವೆ. ಕಾಲುವೆ ಜಾಲ ವ್ಯಾಪ್ತಿಯ ಹಳ್ಳಗಳಿಗೆ ನೀರು ತುಂಬುವ ನಿರ್ಧರಿಸಿ, ಕೆರೆ ಸ್ವಚ್ಛ ಮಾಡಿ ಕಸ ಕಂಟಿ ಸ್ವಚ್ಛ ಮಾಡಿ ಪ್ರತಿ ಸಾವಿರ ಮೀಟರಗೆ ಒಂದು ಚೆಕ್ ಡ್ಯಾಂ ನಿರ್ಮಾಣ ಮಾಡಿ ನೀರು ಹಿಂಗಿಸುತ್ತಿದ್ದೇವೆ. ಇಂದು ಕಡೆ ಕೆರೆ ಉಳಿದಿದ್ದು, ಇನ್ನೊಂದು ಕಡೆ ಹಳ್ಳ ತುಂಬಲಾಗುವುದು ಎಂದರು.

ಹತ್ರಲ್ಲಿ ಆರು ಪ್ಯಾಕೇಜ್ ಕಾಮಗಾರಿ ಆರಂಭಗೊಂಡಿದ್ದು, 277 ಕೋಟಿ ರೂ. ವೆಚ್ಚದಲ್ಲಿ ಪ್ರಾಯೋಗಿಕವಾಗಿ ಆರಂಭವಾಗಿದೆ ಎಂದ ಸಚಿವರು, ಕೆರೆ ತುಂಬುವ ಯೋಜನೆಯಿಂದ ಕೈಬಿಟ್ಟು ಹೋದ ಹಳ್ಳಿಗಳ ಹಳ್ಳ ತುಂಬುವ ಯೋಜನೆ ವ್ಯಾಪ್ತಿಗೆ ಸೇರುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ ಇಲಾಖೆಯ ಎಂಜನೀಯರ್ ಕೊಳ್ಳಿ ತಹಶೀಲ್ದಾರ್ ಸುರೇಶ ಚವಲರ, ತಾಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಸವಂತ್ರಾಯ ಬಿರಾದಾರ, ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ರೈತರು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.



ಆಲಮಟ್ಟಿ ಡ್ಯಾಂ ಎತ್ತರ ಹೆಚ್ಚಿಸುವುದರಿಂದ ಈ ಭಾಗದ ರೈತರಿಗೆ ಇನ್ನಷ್ಟೂ ಅನುಕೂಲವಾಗಲಿದೆ. ಸಣ್ಣನೀರಾವರಿ ಇಲಾಖೆಯು ಅಂತರ್ಜಲ ಹೆಚ್ಚಿಸುವಲ್ಲಿ ಒಂಭತ್ತನೆ ಸ್ಥಾನದಲ್ಲಿದ್ದೇವೆ. ಬೇರೆ ಭಾಗದಲ್ಲಿ 400 ಅಡಿ ಬೋರ್ ಹೊಡೆದರೂ, ನೀರು ಬರಲ್ಲ. ಆದರೆ ಈ ಭಾಗದಲ್ಲಿ ಅಂತರ್ಜಲ ಹೆಚ್ಚಳವಾಗಿದ್ದರಿಂದ ವಿಜಯಪುರ ಜಿಲ್ಲೆ ಈಗ ಇಡೀ ರಾಜ್ಯ ಹಾಗೂ ದೇಶಕ್ಕೆ ಮಾದರಿಯಾಗಿದೆ. ಈ ಕಾರ್ಯದ ಶ್ರೇಯಸ್ಸು ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ. ಪಾಟೀಲರಿಗೆ ಸಲ್ಲಬೇಕು."

■ ಎನ್.ಎಸ್. ಬೋಸರಾಜು
ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

## ಎತ್ತಿನ ಬಂಡಿಯಲ್ಲಿ ಮೆರವಣಿಗೆ, ತುಲಾಭಾರ

ತಮ್ಮ ಜಮೀನುಗಳಿಗೆ ನೀರು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವ ಜಿಲ್ಲಾ ಉಸ್ತುವಾರಿ ಸಚಿವರಿಗೆ ಲೋಹಗಾಂವ ಗ್ರಾಮದ ರೈತರು ಹಾಗೂ ಗ್ರಾಮಸ್ಥರು ವಿಶಿಷ್ಟವಾಗಿ ಕೃತಜ್ಞತೆ ಸಲ್ಲಿಸಿದರು.

ಜೋಡೆತ್ತಿನ ಚಕ್ಕಡಿಯಲ್ಲಿ ಸಚಿವದ್ವಯರನ್ನು ಕೂಡಿಸಿ 'ಚಕ್ಕಡಿ ಬಂಡಿಯಲ್ಲಿ ಮೆರವಣಿಗೆ ಮಾಡುವ ಮೂಲಕ ಗ್ರಾಮಸ್ಥರು ತಮ್ಮ ಮನೆ ಮಗನಂತೆ ಸಚಿವರನ್ನು ಬರಮಾಡಿಕೊಂಡಿದ್ದು ವಿಶೇಷವಾಗಿತ್ತು.

ಗ್ರಾಮದ ಹಳ್ಳದ ಹತ್ತಿರ ಭೂಮಿ ಪೂಜೆ ನೆರವೇರಿಸಿದ ನಂತರ ಶೃಂಗರಿಸಿದ ಜೋಡೆತ್ತಿನ ಬಂಡಿಯಲ್ಲಿ ಸಚಿವದ್ವಯರನ್ನು ಭವ್ಯ ಮೆರವಣಿಗೆ ಮೂಲಕ ವೇದಿಕೆ ಕಾರ್ಯಕ್ರಮ ಸ್ಥಳಕ್ಕೆ ಬರಮಾಡಿಕೊಳ್ಳಲಾಯಿತು.

ವೇದಿಕೆಯ ಆವರಣದಲ್ಲಿ ಐದಾರು ಜೆಸಿಬಿ ಮೂಲಕ ಸಚಿವರಿಬ್ಬರನ್ನು ಹೂಮಾಲೆ ತೊಡಿಸುವ ಮೂಲಕ ತಮ್ಮ ಅಭಿಮಾನ ಮೆರೆದರು.

ವೇದಿಕೆಯಲ್ಲಿದ್ದ ಸಚಿವರಿಬ್ಬರಿಗೆ ಪೇಟ ಸುತ್ತಿ, ಒಣದ್ರಾಕ್ಷಿ ಹಾರ ಹಾಗೂ ಬೆಳ್ಳಿಮೂರ್ತಿ ನೀಡುವ ಮೂಲಕ ಗ್ರಾಮಸ್ಥರು ಸನ್ಮಾನಿಸಿ, ಸಂಭ್ರಮಿಸಿದರು.



ವಿಶೇಷ ತುಲಾಭಾರ ಸಚಿವದ್ವಯರಾದ ಎನ್.ಎಸ್. ಭೋಸರಾಜು ಹಾಗೂ ಡಾ.ಎಂ.ಬಿ.ಪಾಟೀಲರಿಗೆ ಗ್ರಾಮಸ್ಥರ ಪರವಾಗಿ ರೈತರು ತಾವು ಬೆಳೆದ ಹಣ್ಣು ಹಂಪಲುಗಳಿಂದ ತುಲಾಭಾರ ಮಾಡಿದ್ದು ವಿಶೇಷವಾಗಿ ಗಮನಸೆಳೆಯಿತು.

# ಮೂಢನಂಬಿಕೆಯಿಂದ ವೈಚಾರಿಕತೆಯತ್ತ ಕರೆದೊಯ್ದ ಬಸವಣ್ಣನವರು

## ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ಉದಯರಶ್ಮಿ ದಿನಪತ್ರಿಕೆ ಸಂಪಾದಕ ಇಂದುಶೇಖರ ಮಣೂರ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮೂಢನಂಬಿಕೆಯಿಂದ ವೈಚಾರಿಕತೆಯೆಡೆಗೆ ಹಾಗೂ ಲಿಂಗ ಭೇದವಿಲ್ಲದ ಸಮಸಮಾಜದ ಉನ್ನತ ಚಿಂತನೆಗಳನ್ನು ನಾಡಿಗೆ ನೀಡಿದ ಏಕೈಕ ವ್ಯಕ್ತಿತ್ವ ಬಸವಣ್ಣನವರದು ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ಉದಯರಶ್ಮಿ ದಿನಪತ್ರಿಕೆ ಸಂಪಾದಕ ಇಂದುಶೇಖರ ಮಣೂರ ಹೇಳಿದರು.

ನಗರದಲ್ಲಿ ಗುರುವಾರ ಸಂಜೆ ಆಶ್ರಮ ರಸ್ತೆಯ ರಾಮಕೃಷ್ಣ ನಗರದಲ್ಲಿ ಗಜಾನನ ಮಿತ್ರ ಮಂಡಳಿ ಆಯೋಜಿಸಿದ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಮಾರಂಭದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಅನುಭವ ಮಂಟಪ ಸ್ಥಾಪಿಸಿ ವಿಶ್ವದಲ್ಲೇ ಮೊಟ್ಟಮೊದಲು ಪ್ರಜಾಪ್ರಭುತ್ವದ ಚಿಂತನೆಗಳನ್ನು ನೀಡಿದವರು ಬಸವಣ್ಣನವರು. ವರ್ಗ ಬೇಧ ಮತ್ತು ವರ್ಣ ಶ್ರೇಷ್ಠತೆಯನ್ನು ತೆಗೆದುಹಾಕಿದ ಏಕೈಕ ಧರ್ಮ ಬಸವ ಧರ್ಮವಾಗಿದ್ದು. ನಾವೆಲ್ಲ ಸಂಕುಚಿತ ಭಾವ ತೊರೆದು ಬಸವ ಧರ್ಮ ಪಾಲಿಸಬೇಕು ಎಂದು ಇಂದುಶೇಖರ ಮಣೂರ ಕರೆ ನೀಡಿದರು.

ಬಸವನ ಬಾಗೇವಾಡಿಯ ಕಾಂಗ್ರೆಸ್ ಪಕ್ಷದ ಮುಖಂಡ ಜಟ್ಟಿಂಗರಾಯ ಮಾಲಗಾರ ಮಾತನಾಡಿ, ಜಗತ್ತು ಕಂಡ ಬಹು ದೊಡ್ಡ ದಾರ್ಶನಿಕ ಬಸವಣ್ಣನವರು. ಕಾಯಕ ಮತ್ತು ದಾಸೋಹ, ಅರಿವು ಮತ್ತು ಆಚಾರ, ಸಮಾನತೆ ಹಾಗೂ ಮಾನವತೆ ಅವರ ಮೂಲ ತತ್ವಗಳಾಗಿದ್ದವು. ಅವರ ಜನ್ಮಭೂಮಿ ಬಸವ ನಾಡಿನಲ್ಲಿ ಜನಿಸಿದ ನಾವೆಲ್ಲ ಭಾಗ್ಯವಂತರು. ಅವರ ಹೆಸರಿನ "ಬಸವ ಸೇವಾ ಪ್ರಶಸ್ತಿ" ಪಡೆದ ಸ್ನೇಹಿತ ಇಂದುಶೇಖರ ಅವರನ್ನು ಇಂದು ಗೌರವಿಸುತ್ತಿರುವುದು ಸ್ತುತ್ಯಾರ್ಹವಾಗಿದೆ ಎಂದರು.

ಬಿಜೆಪಿ ಮುಖಂಡ ಮಧು ಕಲಾದಗಿ ಹಾಗೂ ಉದ್ಯಮಿ ಸಂಜಯ ಪಾಟೀಲ (ಕನ್ನೂರ) ಮಾತನಾಡಿ, 12 ನೇ ಶತಮಾನದಲ್ಲಿಯೇ ಬಹು ದೊಡ್ಡ ಸಾಮಾಜಿಕ ಕ್ರಾಂತಿ ಮಾಡಿದ ಬಸವಣ್ಣನವರ ಮಾನವತೆ ಮತ್ತು ಸಮಾನತೆಯ ತತ್ವಗಳನ್ನು ನಾವು ಆಚರಣೆಯಲ್ಲಿ ತಂದು, ಅವರ ಮಾರ್ಗದಲ್ಲಿ ಸಾಗಿದರೆ ಅದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೇಳಿದರು.

ರಾಮಕೃಷ್ಣ ನಗರದ ಗಣ್ಯರಾದ ರಾಮಚಂದ್ರ ಅಂಜಿಖಾನೆ, ಮನೋಜ ಕೊಂಡಗೂಳಿ, ವಿರೇಂದ್ರ ಬೆಳಮಗಿ, ಮಹಾದೇವ ಜಂಗಮಶೆಟ್ಟಿ, ಶ್ರೀಶೈಲ ಮಹಾದನಶೆಟ್ಟಿ, ಸುರೇಶ ಕುಲಕರ್ಣಿ, ನಿಂಬಾಳ ಕಾಕಾ, ಕಮಲಾಕರ ಪೀರನಾರಕ, ಬಾಬು ಮಲಕಶೆಟ್ಟಿ, ಮಹೇಶ ಮಠ, ಮಾವಿನಗಿಡದ ಸೇರಿದಂತೆ ಹಲವರಿದ್ದರು.



# ಬರಿದಾಗುತ್ತಿರುವ ಕೃಷ್ಣಾ ನದಿ :ಕೃಷಿಗೆ ತೀವ್ರ ಸಂಕಷ್ಟ

## ಉತ್ತರ ಕರ್ನಾಟಕದ ಜೀವನಾಡಿ ಕೃಷ್ಣೆಗೆ ಸಂಕಷ್ಟ | ನೀರಿನ ಮಟ್ಟ ಗಣನೀಯ ಕುಸಿತ

■ ವರದಿ: ಸಿದ್ರಾಮ್ ಎಮ್ ಇಟ್ಟಿ
■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಉತ್ತರ ಕರ್ನಾಟಕದ ಜೀವನಾಡಿ ಎಂದೇ ಕರೆಯಲ್ಪಡುವ ಕೃಷ್ಣಾ ನದಿ ಈ ಬಾರಿ ಬೇಸಿಗೆ ಆರಂಭದಲ್ಲೇ ಬರಿದಾಗುತ್ತಿರುವುದು ಆತಂಕಕಾರಿಯಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ಹಾಯ್ದು ಹೋಗುವ ಈ ಪ್ರಮುಖ ನದಿ, ಬೆಳಗಾವಿ ಮತ್ತು ಬಾಗಲಕೋಟೆ ಜಿಲ್ಲೆಗಳ ಸೇರಿದಂತೆ ಸುಮಾರು 111 ಗ್ರಾಮಗಳಿಗೆ ಜೀವನಾಡಿಯಾಗಿ ಕಾರ್ಯನಿರ್ವಹಿಸುತ್ತಿದೆ. ಆದರೆ ಈಗ ನೀರಿನ ಕೊರತೆಯಿಂದ ಜನಜೀವನ ಹಾಗೂ ಕೃಷಿ ತೀವ್ರ ಸಂಕಷ್ಟಕ್ಕೆ ಸಿಲುಕಿದೆ.

ಮಹಾರಾಷ್ಟ್ರದಲ್ಲಿ ಉಗಮಗೊಂಡು ಬಾಗಲಕೋಟೆ ಭಾಗದಲ್ಲಿ ಸಂಗಮವಾಗುವ ಕೃಷ್ಣಾ ನದಿ, ಈ ಭಾಗದ ಕೃಷಿ ಚಟುವಟಿಕೆಗಳಿಗೆ ಪ್ರಮುಖ ಆಧಾರವಾಗಿದೆ. ಹಿಪ್ಪರಗಿ ಗ್ರಾಮದಲ್ಲಿ ನದಿಗೆ ಅಡ್ಡವಾಗಿ ನಿರ್ಮಿಸಲಾದ ಹಿಪ್ಪರಗಿ ಬ್ಯಾರೇಜ್‌ನಲ್ಲಿ ಈ ಬಾರಿ ನೀರಿನ ಮಟ್ಟ ಗಣನೀಯವಾಗಿ ಕುಸಿದಿದೆ.

ಜಮಖಂಡಿ ತಾಲೂಕಿನ ಕೃಷ್ಣೆ ನದಿ ತೀರದ ಸುತ್ತಮುತ್ತ ಗ್ರಾಮಗಳಾದ ಶಿರುಗುಪ್ಪಿ, ಮೈಗೂರು, ಆಲಬಾಳ, ಮುತ್ತೂರು, ಕಂಕನವಾಡಿ, ಕಡಕೋಳ ಶೂರಪಾಲಿ, ಜಂಬಗಿ,ಸನಾಳ , ಕುಂಬಾರಹಳ್ಳ, ಆಲಗೂರು, ಚಿಕ್ಕಪಡಸಲಗಿ, ಹಿರೇಪಡಸಲಗಿ, ಟಕ್ಕೋಡ, ಟಕ್ಕಳಕಿ, ಕುಂಚನೂರ, ಲಿಂಗನೂರು, ಚಿನಗುಂಡಿ, ಜಕನೂರ, ಬಿದರಿ, ಜನವಾಡ, ಕವಟಗಿ ಇತರ ಹಳ್ಳಿಗಳ ರೈತರು ನೀರಿಲ್ಲದೆ ಪರದಾಡುವಂತಾಗಿದೆ.



6 ಟಿಎಂಸಿ ಸಾಮರ್ಥ್ಯ ಹೊಂದಿರುವ ಹಿಪ್ಪರಗಿ ಬ್ಯಾರೇಜ್‌ನಲ್ಲಿ ಕಳೆದ ವರ್ಷ ಏಪ್ರಿಲ್ ತಿಂಗಳಲ್ಲಿ ಸುಮಾರು 2.5 ಟಿಎಂಸಿ ನೀರು ಸಂಗ್ರಹವಾಗಿದ್ದರೆ, ಈ ಬಾರಿ ಅದು ಕೇವಲ 1.5 ಟಿಎಂಸಿಗೆ ಇಳಿದಿದೆ. ಇದರಲ್ಲಿ ಬಹುತೇಕ 1.5 ಟಿಎಂಸಿ ನೀರು ಡೆಡ್ ಸ್ಟೋರೇಜ್ ಆಗಿರುವುದರಿಂದ ಬಳಕೆಗೆ ಯೋಗ್ಯವಾದ ನೀರು ಇಲ್ಲದಂತಾಗಿದೆ.

ಹಿಪ್ಪರಗಿ ಜಲಾಶಯದಿಂದ 3 ಲಕ್ಷ ಹೆಕ್ಟರ್ ಕೃಷಿ ಭೂಮಿ ಜಲಾಶಯದ ಮೇಲೆ ಅವಲಂಭಿತವಾಗಿದ್ದು,- ಈಗ ಕುಡಿಯುವ ಸಲುವಾಗಿ ನೀರನ್ನು ಬಿಟ್ಟರೆ ಬೆಳೆಗಳ ಗತಿ ಏನು ಎಂದು ರೈತರು ಅಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ರಾಜಕೀಯ ನಾಯಕರು ಮಹಾರಾಷ್ಟ್ರದ ಸಿಎಂ ಅವರೊಂದಿಗೆ ಮಾತನಾಡಿ ಮೂರು ಟಿಎಂಸಿ ನೀರನ್ನು ತರಲು ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ.

ಕಳೆದ 15 ದಿನಗಳಿಂದ ಕೃಷ್ಣಾ ನದಿ ನೀರು ಸಂಪೂರ್ಣವಾಗಿ ಕಡಿಮೆಯಾಗಿದ್ದು, ರೈತರು ಬೆಳೆದ ಬೆಳೆಗಳಿಗೆ ನೀರು ಒದಗಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಕೃಷಿಭೂಮಿಗಳು ಒಣಗುತ್ತಿದ್ದು, ರೈತರು ಮತ್ತು ಪಶುಪಾಲಕರು ಭಾರೀ ಸಂಕಷ್ಟ ಎದುರಿಸುತ್ತಿದ್ದಾರೆ.

ಸ್ಥಳೀಯ ರೈತರು ಸರ್ಕಾರ ತಕ್ಷಣ ಕ್ರಮ ಕೈಗೊಂಡು ನೀರಿನ ಸಮಸ್ಯೆ ಪರಿಹರಿಸಬೇಕೆಂದು ಆಗ್ರಹಿಸಿದ್ದಾರೆ. ಕೃಷ್ಣಾ ನದಿಯ ಈ ಸ್ಥಿತಿ ಮುಂದುವರಿದರೆ ಉತ್ತರ ಕರ್ನಾಟಕದ ಅನೇಕ ಗ್ರಾಮಗಳಲ್ಲಿ ತೀವ್ರ ಜಲ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ.

" ಮಳೆಗಾಲದಲ್ಲಿ ನದಿ ಬಂದು ಹೊಲ, ಮನೆ ಮುಳುಗಡೆಯಾಗುತ್ತವೆ. ಬೇಸಿಗೆಕಾಲದಲ್ಲಿ ನೀರಿಲ್ಲದೆ ಬೆಳೆಗಳು ಒಣಗಿ ಹೋಗುತ್ತವೆ ಹಾಗೂ ದನ ಕರುಗಳಿಗೆ ಮೇವಿಲ್ಲದೆ ಮಾರಾಟ ಮಾಡುವ ಪರಿಸ್ಥಿತಿ ಉಂಟಾಗಿದೆ. ಶಾಶ್ವತ ಮುಳುಗಡೆ ಮಾಡುವ ಸಲುವಾಗಿ ಪ್ರತಿ ವರ್ಷ ರೈತರು ಹೋರಾಟ ಮಾಡುತ್ತಿದ್ದೇವೆ. ಪ್ರತಿ ಎಕರೆಗೆ 40 ಲಕ್ಷ ಘೋಷಣೆ ಮಾಡಿ ಒಂದು ವರ್ಷ ಕಳೆದರೂ ಕೂಡಾ ರೈತರಿಗೆ ಹಣ ಸಿಕ್ಕಿಲ್ಲ. ನಮ್ಮ ಪರಿಸ್ಥಿತಿ ಸರ್ಕಾರಕ್ಕೆ ತಿಳಿಯುತ್ತಿಲ್ಲ."

■ ಧರೇಪ್ಪ ದಾನಗೌಡ
ಸಾಮಾಜಿಕ ಹೋರಾಟಗಾರ ಹಾಗೂ ಚಿಕ್ಕಪಡಸಲಗಿ ಗ್ರಾಮದ ರೈತ.

"ಬಿಸಿಲಿನ ತಾಪಮಾನ ಮೇ 15ರವರೆಗೆ ಮುಂದುವರೆಯುವ ಸಾಧ್ಯತೆಯಿದ್ದು, ನೀರು ಆವಿಯಾಗುವ ಪ್ರಮಾಣ ಕೂಡ ಅತಿಯಾಗಿದ್ದು, ಜಮಖಂಡಿ ಮತ್ತು ರಬಕವಿ ಬನಹಟ್ಟಿ ನಗರ ಸೇರಿ 35 ಎಮ್ ವಿ.ಎಸ್ ಯೋಜನೆ ಜಾರಿಯಲ್ಲಿದ್ದು, ಅದಕ್ಕಾಗಿ ನದಿ ದಡದಲ್ಲಿ ವಾರಕ್ಕೊಮ್ಮೆ ವಿದ್ಯುತ್ ಕಡಿತಗೊಳಿಸಲಾಗುತ್ತಿತ್ತು, ಮುಂದಿನ ವಾರದಿಂದ ವಾರಕ್ಕೆ ಎರಡು ದಿನ ವಿದ್ಯುತ್ ಕಡಿತಗೊಳಿಸಲಾಗುವುದು. ನೀರಿನ ತೀವ್ರ ಕೊರತೆ ಹಿನ್ನೆಲೆಯಲ್ಲಿ ಜನರು ಹಾಗೂ ಜಾನುವಾರುಗಳ ಬದುಕು ಸಂಕಷ್ಟದಲ್ಲಿದೆ. ಆದಕಾರಣ ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸುವಂತೆ ಸೂಚಿಸಿದ್ದೇವೆ."

■ ಶ್ವೇತಾ ಬಿಡೀಕರ
ಉಪವಿಭಾಗಾಧಿಕಾರಿಗಳು, ಜಮಖಂಡಿ.

## ಮರಾಠಾ ಸಮಾಜ ವತಿಯಿಂದ ಡಾ. ಅಂಬೇಡ್ಕರ್ ಜಯಂತಿ

# ಡಾ. ಬಾಬಾಸಾಹೇಬ್ ಅಂಬೇಡ್ಕರ್ ದೇಶದ ಆಸ್ತಿ: ಸಚಿವ ಸಂತೋಷ ಲಾಡ್

ಬೀದರ್: ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂಬ ನೀತಿಯನ್ನು ನೀಡಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೇವಲ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಕ್ಕೆ ಮಾತ್ರ ಸೀಮಿತವಲ್ಲ. ಅವರು ಇಡೀ ದೇಶದ ಆಸ್ತಿಯಾಗಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಅವರು ತಿಳಿಸಿದರು.

ನಗರದ ಅಂಬೇಡ್ಕರ್ ವೃತ್ತದ ಸಮೀಪ ಬೀದರ ಜಿಲ್ಲಾ ಸಕಲ ಮರಾಠಾ ಸಮಾಜದ ವತಿಯಿಂದ ಆಯೋಜಿಸಿದ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರರು 56 ವಿಷಯಗಳನ್ನು 9 ಭಾಷೆಗಳಲ್ಲಿ ಅಧ್ಯಯನ ಮಾಡಿ ಸುಮಾರು 34 ಪದವಿಗಳನ್ನು ಪಡೆದುಕೊಂಡ ಮಹಾನ್ ತತ್ವಜ್ಞಾನಿಯಾಗಿದ್ದರು. ಹರಿದು ಹಂಚಿಹೋಗಿದ್ದ ಭಾರತದ ಕಾನೂನು ಸುವ್ಯವಸ್ಥೆಯನ್ನು ಸಂವಿಧಾನದ ಮೂಲಕ ಒಂದು ಚೌಕಟ್ಟನ್ನು ಹಾಕಿಕೊಟ್ಟ ಅಖಂಡ ಭಾರತದ ಮಹಾನಾಯಕ ಅಂಬೇಡ್ಕರ್ ಅವರಾಗಿದ್ದಾರೆ ಎಂದರು.

ಸಯ್ಯಾಜಿರಾವ ಗಾಯಕವಾಡ ಮತ್ತು ಶಾಹು ಮಹಾರಾಜ್ ಇವರಿಬ್ಬರು ಅಂಬೇಡ್ಕರ್ ಅವರನ್ನು ಅಧ್ಯಯನ ಮಾಡಲು ವಿದೇಶಕ್ಕೆ ಕಳುಹಿಸಿದ್ದರು. ಹೀಗಾಗಿ ಈ ಮೂವರ ಮಧ್ಯೆ ಅವಿನಾಭಾವ ಸಂಬಂಧವಿತ್ತು. ಈ ಕಾರಣಕ್ಕಾಗಿಯೇ 60 ದೇಶದ ಸಂವಿಧಾನ ಅಧ್ಯಯನ ಮಾಡಿದ ಅಂಬೇಡ್ಕರರು ಬೃಹತ್ ಸಂವಿಧಾನ ರಚನೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಅವರು ಹೇಳಿದರು.

ಲಂಡನ್‌ನಲ್ಲಿ ಕಾರ್ಲ್‌ಮಾರ್ಕ್ಸ್ ಪುತ್ಥಳಿ ಪಕ್ಕದಲ್ಲೇ ಡಾ. ಅಂಬೇಡ್ಕರರ ಮೂರ್ತಿ ಇದೆ. ಅಂತಹ ಮಹಾನ್ ವ್ಯಕ್ತಿತ್ವ ಅಂಬೇಡ್ಕರ್ ಅವರಲ್ಲಿತ್ತು. ಉಚಿತ ಶಿಕ್ಷಣ ಇಡೀ ದೇಶದ ಜನತೆಗೆ ನೀಡಬೇಕೆಂಬ ಪರಿಕಲ್ಪನೆ ಕೊಟ್ಟವರೇ ಅಂಬೇಡ್ಕರರು. ಸ್ಥಳೀಯವಾಗಿ ನ್ಯಾಯ ಸಿಗದೇ ಇದ್ದಾಗ ಕಲಂ 32ರ ಪ್ರಕಾರ ಸುಪ್ರಿಂಕೋರ್ಟ್‌ಗೆ ಹೋಗಿ ನ್ಯಾಯ ಪಡೆದುಕೊಳ್ಳುವ ಹಕ್ಕು ಡಾ. ಬಾಬಾಸಾಹೇಬರು ಈ ದೇಶದ ನಾಗರಿಕರಿಗೆ ನೀಡಿದ್ದಾರೆ ಎಂದು ಅವರು ಪ್ರತಿಪಾದಿಸಿದರು.

ಹಿಂದೆ ಸಮಾಜದಲ್ಲಿ ಅಸ್ಪೃಶ್ಯತೆ ಆಚರಣೆ ಜಾರಿಯಲ್ಲಿತ್ತು. ಚೌಡಾರ್ ಕೆರೆಯಲ್ಲಿ ನಾಯಿ ನರಿ ಹಂದಿ ಕುರಿಗಳು ನೀರು ಕುಡಿಯಬಹುದಿತ್ತು. ಆದರೆ ಮನುಷ್ಯರಾದ ದಲಿತ ಸಮಾಜದವರು ನೀರು ಕುಡಿಯುವಂತಿರಲಿಲ್ಲ. ಇಂತಹ ಸಂದರ್ಭದಲ್ಲಿ ಡಾ. ಬಾಬಾ ಸಾಹೇಬರು ಹೋರಾಟ ಮಾಡಿ ಚೌಡಾರ್ ಕೆರೆ ನೀರು ಕುಡಿಯಲು ಅವಕಾಶ ಮಾಡಿಕೊಟ್ಟಿದ್ದಾರೆ ಎಂದರು. ಸತಿಸಹಗಮನ ಪದ್ಧತಿ ಆಚರಣೆಯಲ್ಲಿದ್ದ ಭಾರತದ ಮಹಿಳೆಗೆ ಪಿತ್ರಾರ್ಜಿತ, ಗಂಡನ ಆಸ್ತಿಯಲ್ಲಿ ಹಕ್ಕಿದೆ ಎಂದು ಪ್ರತಿಪಾದಿಸಿದವರೇ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು. ಹಿಂದೂ ಕೋಡ್ ಬಿಲ್ ಜಾರಿಗೆ ತಂದು ಎಲ್ಲರಿಗೂ ಅನುಕೂಲ ಮಾಡಿಕೊಟ್ಟಿದ್ದಾರೆ. ಮಹಿಳೆಯರು ಯಾವ ದೇವರಿಗೆ ದೀಪ ಹಚ್ಚುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ ಪ್ರತಿದಿನ ಅಂಬೇಡ್ಕರ್ ಅವರ ಮುಂದೆ ಒಂದು ಜ್ಯೋತಿ ಹಚ್ಚಲೇಬೇಕು ಎಂದು ಸಂತೋಷ ಲಾಡ್ ಹೇಳಿದರು. ಬಾಬಾ ಸಾಹೇಬರ ಅನುಯಾಯಿಗಳು ಅವರ ವಿಚಾರಗಳನ್ನು ಪ್ರತಿ ಮನೆಮನೆಗಳಿಗೆ ತಲುಪಿಸುವ ಕಾರ್ಯ ಮಾಡಬೇಕೆಂದು ಅವರು ಸಲಹೆ ನೀಡಿದರು.



ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹಿಂಖಾನ್ ಮಾತನಾಡಿ ತಮ್ಮ ತಮ್ಮ ಸಮಾಜದ ನಾಯಕರ ಜಯಂತಿ ಆಚರಣೆ ಮಾಡುವುದು ಸಹಜ. ಆದರೆ ಡಾ. ಅಂಬೇಡ್ಕರರ ಜಯಂತಿಯನ್ನು ಇಂದು ಮರಾಠಾ ಹಾಗೂ ದಲಿತ ಸಮುದಾಯದವರು ಕೂಡಿ ಆಚರಣೆ ಮಾಡುತ್ತಿರುವುದು ಶ್ಲಾಘನೀಯ. ಇದೇ ರೀತಿ ಎಲ್ಲರೂ ಆಚರಣೆ ಮಾಡಿದರೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಮಾನತೆ ಮೂಡುತ್ತದೆ ಎಂದರು. ಅಧ್ಯಕ್ಷತೆ ವಹಿಸಿದ್ದ ದಾದಾ ಮಹಾರಾಜ್ ನಗರಕರ್ ಅವರು ಮಾತನಾಡಿ ಮರಾಠಾ ಸಮಾಜ ಹಾಗೂ ದಲಿತ ಸಮುದಾಯ ಒಂದಾಗಿರಬೇಕು. ಭಿನ್ನಾಭಿಪ್ರಾಯ ಇರಬಾರದು. ಐಕ್ಯತೆಯಿಂದ ಸಾಗಿದರೆ ಸಹೋದರತ್ವ ಮೂಡುತ್ತದೆ. ಡಾ. ಅಂಬೇಡ್ಕರ್ ಜಯಂತಿ ಆಚರಣೆ ಮಾಡಿದಂತೆ ಎಲ್ಲ ಸಮಾಜದ ಮಹಾತ್ಮರ ಜಯಂತಿ ಮುಂದಿನ ದಿನಗಳಲ್ಲಿ ಆಚರಣೆ ಮಾಡಲಾಗುವುದು ಎಂದರು.

ಮೆಹಕರ್‌ನ ರಾಜಶೇಖರ ಶಿವಾಚಾರ್ಯರು ಮಾತನಾಡಿದರು. ಭಂತೆ ವರಜ್ಯೋತಿ, ಪೂಜ್ಯ ಶ್ರೀ ಬೆಲ್ದಾಳ ಸಿದ್ಧರಾಮ ಶರಣರು, ಫಾದರ್ ಕ್ಲೇರಿ ಡಿಸೋಜಾ, ರಾಜಗುರು ಮಹಾರಾಜ್ ಸಾನಿಧ್ಯ ವಹಿಸಿದ್ದರು. ವೇದಿಕೆ ಮೇಲೆ ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದ ಅರಳಿ, ಮುಖಂಡ ತರುಣ ನಾಗಮಾರಪಳ್ಳಿ, ಕರ್ನಾಟಕ ಲಿಡ್ಕರ್ ಅಧ್ಯಕ್ಷ ನಾಗರಾಜ್ ಮುಂಡರಗಿ, ಸಕಲ ಮರಾಠಾ ಸಮಾಜ ಸಂಯೋಜಕ ಪ್ರದೀಪ ಬಿರಾದಾರ್, ಡಾ. ಭೀಮಸೇನರಾವ ಶಿಂಧೆ, ಬುಡಾ ಅಧ್ಯಕ್ಷ ಬಸವರಾಜ್ ಜಾಬಶೆಟ್ಟಿ, ದಿಗಂಬರರಾವ ಮಾನಕಾರಿ, ಜನಾರ್ಧನ ಬಿರಾದಾರ್ ಮುಂತಾದವರು ಪಾಲ್ಗೊಂಡಿದ್ದರು.

ಶಿವಾಜಿರಾವ ಪಾಟೀಲ್ ಮುಂಗನಾಳ್ ಅವರು ಸ್ವಾಗತಿಸಿದರು. ವಿನೋದ ಅವರು ಕಾರ್ಯಕ್ರಮ ನಿರೂಪಿಸಿದರು. ವಿದ್ಯಾಸಾಗರ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಅನುಯಾಯಿಗಳು ಸುಮಾರು 5 ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

## ಆರ್ಟ್ ಆಫ್ ಲಿವಿಂಗ್ ಶಿಕ್ಷಕ ತರಬೇತಿ; ಚಿಕ್ಕಬಸೆಗೆ ಸನ್ಮಾನ

ಬೀದರ್: ಆರ್ಟ್ ಆಫ್ ಲಿವಿಂಗ್ ಶಿಕ್ಷಕ ತರಬೇತಿ ಪೂರ್ಣಗೊಳಿಸಿದ ಕಾಮಶೆಟ್ಟಿ ಚಿಕ್ಕಬಸೆ ಅವರನ್ನು ನಗರದ ಕುಂಬಾರವಾಡ ಸಮೀಪದ ನವೀನ್ ಪಬ್ಲಿಕ್ ಸ್ಕೂಲ್‌ನಲ್ಲಿ ಇರುವ ಆರ್ಟ್ ಆಫ್ ಲಿವಿಂಗ್ ಜಿಲ್ಲಾ ಮಾಹಿತಿ ಕೇಂದ್ರದಲ್ಲಿ ಗುರುವಾರ ಸನ್ಮಾನಿಸಲಾಯಿತು. ಆರ್ಟ್ ಆಫ್ ಲಿವಿಂಗ್‌ನ ಬೆಂಗಳೂರಿನ ಶರಣಾನಂದ ಸ್ವಾಮೀಜಿ ಶಾಲು ಹೊದಿಸಿ, ಹೂಮಾಲೆ ಹಾಕಿ ಗೌರವಿಸಿದರು.

ಕಾಮಶೆಟ್ಟಿ ಚಿಕ್ಕಬಸೆ ಆರ್ಟ್ ಆಫ್ ಲಿವಿಂಗ್ ಜಿಲ್ಲಾ ಅಭಿವೃದ್ಧಿ ಸಮಿತಿ ಸದಸ್ಯರಾಗಿ ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದೀಗ ಶಿಕ್ಷಕ ತರಬೇತಿ ಪೂರ್ಣಗೊಳಿಸಿದ್ದು, ಶಿಬಿರಗಳ ಮೂಲಕ ಸಾರ್ವಜನಿಕರಿಗೆ ಯೋಗ, ಧ್ಯಾನ ಹಾಗೂ ವಿಶೇಷವಾಗಿ ಸುದರ್ಶನ ಕ್ರಿಯೆಗಳನ್ನು ಹೇಳಿಕೊಡಲಿದ್ದಾರೆ. ಮಂಜುಳಾ ಮುಚಳಂಬೆ, ಶಾಲೆಯ ಪ್ರಾಚಾರ್ಯ ರಾಜಪ್ಪ ಬಿರಾದಾರ, ಸುಧಾರಾಣಿ, ದೀಪಾರಾಣಿ, ಭಾನುಪ್ರಿಯ, ಪಲ್ಲವಿ, ಸುವರ್ಣಾ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.




ಬೀದರ್: ಜನಜನಿತ ಕಲಾ ಪ್ರದರ್ಶನ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಸಹಯೋಗದಲ್ಲಿ ಬೀದರ ನಗರದಲ್ಲಿ ಉಚಿತ ಅಭಿನಯ ರಂಗ ಶಿಬಿರವನ್ನು ಆಯೋಜಿಸಲಾಗಿದೆ. ಶಿಬಿರವು ಮೇ 2, ರಿಂದ ಆರಂಭವಾಗಲಿದ್ದು, ಆಸಕ್ತ ಯುವಕ–ಯುವತಿಯರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಸಂಘದ ವತಿಯಿಂದ ಮನವಿ ಮಾಡಲಾಗಿದೆ.

ರಂಗಭೂಮಿಯ ಉಳಿವು ಮತ್ತು ಹೊಸ ಪ್ರತಿಭೆಗಳ ಬೆಳವಣಿಗೆಗಾಗಿ ಇಂತಹ ಶಿಬಿರಗಳು ಅತ್ಯಂತ ಮಹತ್ವದ್ದಾಗಿವೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ. ಶಿಬಿರವು ಚಲನಚಿತ್ರ ನಟ ಯಶವಂತ ಕುಚಬಾಳ ಅವರ ನೇತೃತ್ವದಲ್ಲಿ ನಡೆಯಲಿದ್ದು, ರಾಘವೇಂದ್ರ ಹಳಿಪೇಟ್, ಅರುಣ್ ಮಾನ್ವಿ, ವಿಶಾಲ್ ಪಾಟೀಲ್ ಹಾಗೂ ಸ್ನೇಹಾ ಅವರು ಅಭಿನಯ ತರಬೇತಿಯನ್ನು ನೀಡಲಿದ್ದಾರೆ.

ಅಭಿನಯ ರಂಗ ಶಿಬಿರವು ನಗರದ ಶಾಹಪೂರ ಗೇಟ್ ರೋಡ, ನ್ಯಾಷನಲ್ ಮಾರ್ಕೆಟ್ ಹಿಂಭಾಗ, ರವೀಂದ್ರ ಶಾಲೆ ಮುಂಭಾಗದಲ್ಲಿ ಜರುಗಲಿದೆ.ಅಭಿನಯದಲ್ಲಿ ಆಸಕ್ತಿ ಹೊಂದಿರುವವರು ತಕ್ಷಣವೇ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ಹಾಗೂ ಮಾಹಿತಿಗಾಗಿ 9980893230 / 9986216290 / 8095691777 ಮೊಬೈಲ್ ನಂಬರುಗಳಿಗೆ ಸಂಪರ್ಕಿಸಲು ಸಂಘದ ಕಾರ್ಯದರ್ಶಿ ಎಸ್.ಬಿ. ಕುಚಬಾಳ್ ಅವರು ತಿಳಿಸಿದ್ದಾರೆ.

## ಅದ್ದೂರಿಯಾಗಿ ನಡೆದ ಗ್ರಾಮದೇವಿ ಊಡಿತುಂಬುವ ಸಂಪ್ರದಾಯ

ಬಾಗಲಕೋಟೆ: ಸಮಿಪದ ಹೊಸ ಮುರನಾಳದಲ್ಲಿ ಕಡೆಯ ಮಂಗಳವಾರ ವೈಭವಯುತವಾಗಿ ಶ್ರದ್ಧಾಭಕ್ತಿಯಿಂದ ಗ್ರಾಮಸ್ಥರು ಶ್ರೀಗ್ರಾಮದೇವಿಗೆ ಊಡಿ ತುಂಬಿ ಸಂಪೂರ್ಣ ಮಳೆಯಾಗಿ ಚೆನ್ನಾಗಿ ಬೆಳೆ ಬಂದು ಲೋಕವೆಲ್ಲ ಸಮೃದ್ಧಿಯಾಗಲಿ, ಗ್ರಾಮದಲ್ಲಿ ರೋಗರುಜಿಗಳು ಬಾರದೆ ಇರಲಿ ಎಂದು ಪ್ರಾರ್ಥಿಸಿದರು.

ವಾರದ ವೃತದ ಕಡೆಯ 5 ನೇ ಮಂಗಳವಾರ ಬೆಳಗಿನ ಜಾವ ಶ್ರೀ ದೇವಿಗೆ ಪಂಚಾಮೃತ ಅಭಿಷೇಕ, ಶ್ರೀಸೂಕ್ತ ಪಠಣ, ಶ್ರೀಚಕ್ರಕ್ಕೆ ಕುಂಕುಮಾರ್ಚನೆ, ಎಲಿ ಪೂಜೆ, ಪುಷ್ಪಾಲಂಕಾರ ಮಾಡಿ ಮಹಾಮಂಗಳಾರುತಿ ಮಾಡಲಾಯಿತು, ಮದ್ಯಾಹ್ನ 12 ಗಂಟೆಗೆ ತವರು ಮನೆಯ ಸೀರೆ ಹಾಗೂ ಊಡಿ ತುಂಬುವ ಕಾರ್ಯ ಜರುಗಿತು, ನಂತರ ಸಾಯಂಕಾಲ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ ದೇವಿಯ ಘಳಿಗೆಗೆ ವಿಶೇಷ ಪೂಜೆ ಸಲ್ಲಿಸಿ ಅಲ್ಲಿಂದ ಗ್ರಾಮದ ವಿವಿಧ ರಸ್ತೆಗಳ ಮೂಲಕ ಭವ್ಯ ಮೆರವಣಿಗೆ ಮೂಲಕ ಗ್ರಾಮದೇವಿ ದೇವಸ್ಥಾನವನ್ನು ತಲುಪಲಾಯಿತು, ಮೆರವಣಿಗೆಯಲ್ಲಿ ಛತ್ರಿ, ಚಾಮರ, ಡೋಳ್ಳು, ಪೋತುರಾಜ, ವೀರಗಾರ್ಕಿಯವರ ಸೇವೆ ಎಲ್ಲರನ್ನು ಚಕಿತಗೊಳಿಸಿತು, ಗೊಂಬೆಗಳ ಪ್ರದರ್ಶನ ಎಲ್ಲರ ಗಮನ ಸೇಳೆಯಿತು.



ನಂತರ ದೇವಸ್ಥಾನದಲ್ಲಿ ಶ್ರೀದೇವಿಗೆ ಘಳಿಗೆಯನ್ನು ಉಡಿಸಿ,ಪುಷ್ಪಗಳಿಂದ ಅಲಂಕರಿಸಿ ಶ್ರೀ ಮಳೆರಾಜೇಂದ್ರಸ್ವಾಮಿ ಮಠ ಪೂಜ್ಯರಾದ ಗಂಗಾಧರಸ್ವಾಮಿಗಳು ಹಾಗೂ ಹೊಳೆ ಆಲೂರಿನ ಯಚ್ಚರೇಶ್ವರಮಹಾಸ್ವಾಮಿಗಳು ಮತ್ತು ಮೌನೇಶ್ವರಸ್ವಾಮಿಗಳು ಸಾನಿಧ್ಯದಲ್ಲಿ ಗ್ರಾಮದ ಹಿರಿಯರು, ಮಹಿಳೆಯರು ಗ್ರಾಮದೇವಿಗೆ ಊಡಿ ತುಂಬಿದರು ನಂತರ ಮಹಾಮಂಗಳಾರುತಿ ಮಾಡಲಾಯಿತು ಈ ಸಮಯದಲ್ಲಿ ಗ್ರಾಮಸ್ಥರು ಚೆನ್ನಾಗಿ ಮಳೆ ಸುರಿದು ಉತ್ತಮ ಬೆಳೆ ಬೆಳೆದು ಲೋಕವೆಲ್ಲಾ ಸಮೃದ್ದಿಯಾಗಲಿ, ಗ್ರಾಮದಲ್ಲಿ ಯಾವುದೆ ರೋಗರುಜಿನಗಳು ಬಾರದೆ ಇರಲಿ ಎಂದು ಪ್ರಾರ್ಥನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರು ಗ್ರಾಮದ ಹಿರಿಯರು, ಮುಖಂಡರು, ಯುವಕರು, ಮಹಿಳೆಯರು, ರೈತರು, ಬಾಬದವರು ಸೇರಿದಂತೆ ಸಾವರಾರು ಸಂಖ್ಯೆಯಲ್ಲಿ ಜನ ಭಾಗವಹಿಸಿದ್ದರು.

ಮಳೆಗಾಗಿ ವಿಶೇಷ ಆಚರಣೆ : ಬಾಗಲಕೋಟೆ ಜಿಲ್ಲೆಯಾದ್ಯಂತ ಎಲ್ಲ ಹಳ್ಳಿಗಳಲ್ಲಿ ಈ ನೀರ ನೈವೇದ್ಯ ವಾರದ ವೃತ ಪ್ರಾರಂಬಿಸಿದ್ದಾರೆ ಬಾಗಲಕೋಟೆ ತಾಲ್ಲೂಕಿನ ಮುರನಾಳ ಗ್ರಾಮದಲ್ಲಿ ಸದ್ಯ ಈ ವಾರದ ವೃತ ಪ್ರಾರಂಭಿಸಿ 5 ವಾರಗಳನ್ನು ಮುಗಿಸಿ ಮಂಗಳವಾರ ಕಡೆ ವಾರವಾಗಿತ್ತು ಅಂದು ಗ್ರಾಮದೇವತೆಗೆ ಈಡಿ ಗ್ರಾಮದ ಪರವಾಗಿ ಉಡಿ ತುಂಬುವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ನೀರಿಗೂ ವಾರಗಳಿವೆ, ಈ ಬಾಗದ ಬಹುತೆಕ ಗ್ರಾಮಗಳು ಅಕ್ಷರಶ: ಬಿಸಿಲೂರುಗಲು, ಮೊದಲಿನಿಂದಲೂ ಇಲ್ಲಿ ಮಳೆ ಕಡಿಮೆನೆ, ಎಲ್ಲ ಕಾಲದಲ್ಲೂ ಬರಗಾಲವೆ ಅಧಿಕ, ಹಾಗಾಗಿ ಇಲ್ಲಿನ ಜನತೆ ಮಳೆಗಾಗಿ ಪ್ರಾರ್ಥಿಸುವಷ್ಟು ಇನ್ನಾವುದಕ್ಕೂ ಹಲುಬುವುದಿಲ್ಲ, ಇದೆ ಕಾರಣಕ್ಕೆ ಮುಂಗಾರು ಆಗಮನಕ್ಕೂ ಮುನ್ನ ಊರಿನ ಎಲ್ಲ ದೇವರಿಗೆ "ನೀರಿನ ನೈವೇದ್ಯ"ದ ಮೂಲಕ ವರುಣನ ಪ್ರಾರ್ಥನೆ,ಇದಕ್ಕಾಗಿ ಅವರು ಆಚರಿಸುವ ಹಬ್ಬ "ನೀರಿನ ವಾರ" ಅಂದರೆ ವಾರದ ವೃತ. ಜಗತ್ತಿನಾದ್ಯಂತ ಕಛೇರಿ ಕೆಲಸಗಳಿಗೆ ಭಾನುವಾರ ರಜೆ, ಆದರೆ ಈ ಬಾಗದಲ್ಲಿ ಪ್ರತಿ ಸೋಮವಾರ ಕೃಷಿಕರಿಗೆ ರಜೆ, ಅಂದು ಎತ್ತುಗಳನ್ನು ಗಳೆ ಹೂಡುವುದಿಲ್ಲ, ಇಷ್ಟಿದ್ದಾಗ್ಯೂ ಪ್ರತಿವರ್ಷ ಐದು ಮಂಗಳವಾರಗಳನ್ನು ನೀರಿನ ವಾರ ಎಂದು ಆಚರಿಸುತ್ತಾರೆ, ಮಂಗಳವಾರದಂದು ಗ್ರಾಮದ ರೈತರಿಗೆ ಮತ್ತು ಬಡಿಗತನ, ಕಂಬಾರಿಕೆ, ಕುಂಬರಿಕೆ ಚಮ್ಮಾರಿಕೆ. ಇನ್ನಿತರ ವೃತ್ತಿಮಾಡುವ–ರಿಗೆಲ್ಲ ಅಂದು ರಜೆ, ಕಡೆ ಐದನೇ ವಾರ ಊರಿನ ದೇವತೆಗಳಿಗೆ ವಿಶೇಷ ಪೂಜೆ ಸಲ್ಲಿಸಿ ಗ್ರಾಮದ ಗ್ರಾಮದೇವತೆಗೆ ಊಡಿತುಂಬಿ ಸಂಪೂರ್ಣ ಮಳೆಯಾಗಿ ಉತ್ತಮ ಬೇಳೆಬೇಳೆದು ಸಮೃದ್ದಿಯಾಗಲಿ, ಗ್ರಾಮದಲ್ಲಿ ಯಾವುದೆ ರೋಗ ರುಜಿನಗಳು ಬಾರದಂತೆ ಪ್ರಾರ್ಥಿಸುವುದು ವಾಡಿಕೆ.

ಒಟ್ಟಾರೆ ಈ ಮಳೆ ಆರಧಾನೆಯ ಆಚರಣೆಗಳು ಇನ್ನು ಜೀವಂತವಾಗಿವೆ ಎಂಬುದಕ್ಕೆ ಇವು ಸಾಕ್ಷಾತಾ ಉದಾರಣೆ, ಮಳೆ ಬೆಳೆ ಸಮೃದ್ಧಿಯಾಗಿ ರೈತರ ಬಾಳು ಹಸನಾದರೆ ಇಡಿ

## ಕೃಷಿ ಮತ್ತು ಉದ್ಯಮ ವಲಯಕ್ಕೆ ಹೆಚ್ಚಿನ ಒತ್ತು

### 16367.83ಕೋಟಿ ರೂಪಾಯಿಗಳ ವಾರ್ಷಿಕ ಸಾಲ ಯೋಜನೆ



ವಿಜಯಪುರ: ಜಿಲ್ಲೆಯ ಆರ್ಥಿಕ ಪ್ರಗತಿಗೆ ಪೂರಕವಾಗಿರುವ 2026–2027ನೇ ಹಣಕಾಸು ವರ್ಷದ ಜಿಲ್ಲಾ ವಾರ್ಷಿಕ ಸಾಲ ಯೋಜನೆಯನ್ನು ಬುಧವಾರ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಬಿಡುಗಡೆ ಮಾಡಲಾಯಿತು. ಜಿಲ್ಲೆಯ ಅಗ್ರಣೀಯ ಬ್ಯಾಂಕ್ ಆಗಿರುವ ಕೆನರಾ ಬ್ಯಾಂಕ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳಾದ ರಿಷಿ ಆನಂದ ಅವರು ಈ ಸಾಲಿನ ವಾರ್ಷಿಕ ಸಾಲ ಯೋಜನೆ ಕೈಪಿಡಿ ಬಿಡುಗಡೆಗೊಳಿಸಿದರು.

ಪ್ರಸಕ್ತ ವರ್ಷದ ಸಾಲ ಯೋಜನೆಯ 16367.83 ಕೋಟಿ ರೂ. ವಿತರಣೆಯ ಗುರಿಯನ್ನು ಹೊಂದಿದೆ . ಇದು ಕಳೆದ ವರ್ಷದ ವಾರ್ಷಿಕ ಸಾಲ ಯೋಜನೆ ಯ ಶೇಕಡಾ 10.90 ಪಟ್ಟು ಹೆಚ್ಚಿನ ಗು–ರಿಯಾಗಿದೆ. ಆದ್ಯತಾ ವಲಯಕ್ಕೆ : ಒಟ್ಟು ಯೋಜನೆ ಶೇ:69.59 ರಷ್ಟು ಅಂದರೆ ರೂ11389.96 ಕೋಟಿ ಮೀಸಲಿಡಲಾಗಿದೆ. ಕೃಷಿ ವಲಯಕ್ಕೆ : ಒಟ್ಟು ಯೋಜನೆ ಶೇ: 51.46 ರಷ್ಟು ಅಂದರೆ 8422.71 ಕೋಟಿ ರೂಪಾಯಿ ಮೀಸಲಿಡಲಾಗಿದೆ. ಉದ್ಯಮಿ ವಲಯಕ್ಕೆ: ಒಟ್ಟು ಯೋಜನೆ ಯೋಜನೆಯ ಶೇ:16.90 ಅಂದರೆ ರೂ2765.48 ಕೋಟಿ ಮೀಸಲಿಡಲಾಗಿದೆ. ಶಿಕ್ಷಣ ಸಾಲ ರೂ 53.43 ಕೋಟಿ, ವಸತಿ ಸಾಲ ರೂ 94.07 ಕೋಟಿ ಮತ್ತು ಇತರೆ ಸಾಲ ರೂ 28.84 ಕೋಟಿ ಸಾಲದ ಗುರಿ ಹೊಂದಲಾಗಿದೆ.


ಈ ಸಮಯದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳಾದ ರಿಷಿ ಆನಂದ ಅವರು ಬ್ಯಾಂಕುಗಳು ಸಕಾಲದಲ್ಲಿ ಮೇಲಾಧಾರ ರಹಿತ ಸಣ್ಣ ಸಾಲುಗಳನ್ನು ನಿರುದ್ಯೋಗಿಗಳಿಗೆ ಕೊಟ್ಟರೆ, ನಿರುದ್ಯೋಗ ನಿರ್ಮೂಲನೆಗೆ ಸಹಕಾರಿ ಯಾಗುವದು ಎಂದು ತಿಳಿಸಿದರು.

ಕಳೆದ ಸಾಲಿನ ವಾರ್ಷಿಕ ಯೋಜನೆಯ ಪ್ರಗತಿಯ ಅಂಕಿ ಅಂಶಗಳನ್ನು ಅಗ್ರಣಿ ಬ್ಯಾಂಕ್ ಮುಖ್ಯ ಪ್ರಬಂಧಕರಾದ ಕೆ ಸಿದ್ದಯ್ಯ ಅವರು ವಿವರವಾಗಿ ತಿಳಿಸಿದರು. ಸಾಲ ಮತ್ತು ಠೇವಣಿಯ ಅನುಪಾತ ಶೇಕಡಾ 106 ಆಗಿದ್ದು, ಅತ್ಯುತ್ತಮ ಗುರಿ ಸಾಧನೆ ಎಂದು ಅವರು ತಿಳಿಸಿದರು.

ಈ ವೇಳೆ ನಾಬಾರ್ಡ್ ಡಿಡಿ ಎಂ ಶ ವಿಕಾಸ ರಾಠೋಡ, ಕೆನರಾ ಬ್ಯಾಂಕ್ ವಿಭಾಗಿಯ ಪ್ರಬಂಧಕ ದೀಪಕ್ ಕುಮಾರ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಅಶೋಕ ಸೋಂಗರಿ ಮುಖ್ಯ ವ್ಯವಸ್ಥಾಪಕ ವಿ ಬಿ ಕುಲಕರ್ಣಿ, ಎಸ್ ಬಿ ಐ ಮುಖ್ಯವಸ್ಥಾಪಕ ಹರೀಶ್ ನಾಯಕ ವಿನೋದ್ ಮಾದರ, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಪ್ರಬಂಧಕ ಅನಿಲ ಮಹಾಂಕಾಳಿ, ಡಿಸಿಸಿ ಬ್ಯಾಂಕ್ ಪ್ರಬಂಧಕ ರಮೇಶ್ ಹಿಟ್ಟನಹಳ್ಳಿ, ಐಸಿಐಸಿಐ ಬ್ಯಾಂಕ್ ಪ್ರಬಂಧಕ ಶಿವಪುತ್ರ ನಿಂಬಾಳ, ಸೂರ್ಯೋದಯ ಎಫ ಬಿ ಪ್ರಬಂಧಕ ಪ್ರದೀಪ್, ಕೋಟಕ್ ಮಹೀಂದ್ರಾ ಬ್ಯಾಂಕ್ ಪ್ರಬಂಧಕ ರವೀಂದ್ರ ಅಂಗಡಿ ಸೇರಿದಂತೆ ವಿವಿಧ ಬ್ಯಾಂಕುಗಳ ಜಿಲ್ಲಾ ಸಂಯೋಜಕರು ಮತ್ತು ಲೈನ್ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಎಸ್‌ಐನ ಸದ್ಬಳಕೆ ಮಾಡಿಕೊಳ್ಳಿ : ಡಾ. ಮಾನಸಾ

ಬಾಗಲಕೋಟೆ :ಇಎಸ್‌ಐ ಕಾರ್ಡ್‌ ನಿಂದ ಪಲಾನುಭವಿಗಳಿಗೆ ಮತ್ತು ಅವರ ಕುಟುಂಬದ ಸದಸ್ಯರಿಗೆ ಪ್ರಾಥಮಿಕ ಚಿಕಿತ್ಸೆ ಮತ್ತು ಹೆಚ್ಚಿನ ಚಿಕಿತ್ಸೆಗೆ ಅನುಕೂಲವಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಇಎಸ್‌ಐ ನ ಅಧಿಕಾರಿಯಾದ ಡಾ.ಮನಸಾ ಅವರು ಹೇಳಿದರು.




ನಗರದ ಬಿವಿವಿ ಸಂಘದ ಆರ್ಯವೇದಿಕ ಮಹಾವಿದ್ಯಾಲಯ, ಕಾರ್ಮಿಕರ ರಾಜ್ಯ ವಿಮಾ ಯೋಜನೆ(ವೈಸೇ)ಇವರ ಸಂಯುಕ್ತ ಆಶ್ರಯದಲ್ಲಿ ಗುರುವಾರ ಆಯುರ್ವೇದಿಕ ಕಾಲೇಜಿನ ಸಭಾಭವನದಲ್ಲಿ ನಡೆದ ಇಎಸ್‌ಐ ವಿಮಾದಾರ–ರಿಗೆ ವೈದ್ಯಕೀಯ ಫಲಾನುಭವಿಗಳ ತಿಳುವಳಿಕೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಅವರು ಇಎಸ್‌ಐ ಕಾರ್ಡ್ ನಿಂದ ಇಪತ್ತು ಸಾವಿರ ರೂ ಹಾಗೂ ಅಂಗವಿಕಲರಿಗೆ ಇಪ್ಪತ್ತೈದು ಸಾವಿರ ರೂ ನೀಡಲಾಗುವುದು ಇದರ ಉಪಯೋಗವನ್ನು ಸರಿಯಾಗಿ ಬಳಸಿಕೊಳ್ಳಲು ಪಲಾನುಭವಿಗಳು ಇ ಪೆಚೆಂಟ ಕಾರ್ಡ್ ನಲ್ಲಿ ಮಾಹಿತಿಯನ್ನು ದೋಷಗಳಿಲ್ಲದಂತೆ ಭರ್ತಿ ಮಾಡಬೇಕು ಹಾಗೂ ಅದರಲ್ಲಿ ಕುಟುಂಬಡಾ ಸದಸ್ಯರ ಮಾಹಿತಿ ಮತ್ತು ಫೋಟೋವನ್ನು ಲಗತ್ತಿಸಿರಬೇಕು ಎಂದು ಹೇಳಿದರು.

ಇಎಸ್‌ಐ ಕಾರ್ಡ್‌ನಿಂದ ಹೃದಯಘಾತ, ಅಪಘಾತ,ಸುಟ್ಟ ಗಾಯ, ವಿಶಪ್ರಾಷಣ, ಹಾವು ಕಚ್ಚಿದಾಗ, ಲಕ್ವಾ, ಗರ್ಭಪಾತ, ಡೆಂಗೂ ಜ್ವರ ಇವುಗಳಿಗೆ ಹೊರಗಡೆ ಚಿಕಿತ್ಸೆ ಪಡೆದರೂ ನಿಗದಿತ ಸಮಯದಲ್ಲಿ ರಿಪೀರೆನ್ಸ್ ಲೆಟರ್, ಈ ಪೆಚೆಂಟ ಕಾರ್ಡ್ (ಇದನ್ನು 6 ತಿಂಗಳಿಗೊಮ್ಮೆ ಉಪಡೇಟ್ ಮಾಡಬೇಕು),ಕೆಲಸ ಮಾಡುವ ಸ್ಥಳದಿಂದ ಸೇವಾ ಪ್ರಮಾಣ ಪತ್ರ,ರೋಗಿಯ ಆದ–ಾರ್ ಕಾರ್ಡ್ ಮತ್ತು ಎರಡು ಫೋಟೋ ಇವುಗಳನ್ನು ಸಮಯಕ್ಕೆ ಸರಿಯಾಗಿ ಸಿದ್ದಮಾಡಿಕೊಂಡರೆ ಇಎಸ್‌ಐ ನ ಅಡಿಯಲ್ಲಿ ಸರಳವಾಗಿ ಅನುಕೂಲ ಪಡೆಯಬಹುದು ಎಂದರು.

ಪ್ರಾಚಾರ್ಯರಾದ ಎಂ. ಎಸ್.ಹಿರೇಮಠ ಮಾತನಾಡಿ ಇಎಸ್‌ಐ ನ ಅಡಿಯಲ್ಲಿ ಸಿಗುವಂತಹ ಎಲ್ಲಾ ಅನುಕೂಲಗಳನ್ನು ಪಡೆಯುವಲ್ಲಿ ಪಲಾನುಭವಿಗಳು ಯಶಸ್ವಿಯಾಗಿಲ್ಲ ಇನ್ನೂ ಕೆಲವು ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ ಅದಕ್ಕಾಗಿ ಇಂತಹ ಅರಿವು ಕಾರ್ಯಕ್ರಮಗಳನ್ನು ಆಯೋಜಿಸಿದರೆ ಅವರಿಗೆ ಸಹಾಯವಾಗುತ್ತದೆ ಎಂದರು.

## ಮಲೇರಿಯಾ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ

ವಿಜಯಪುರ: ಸಾಂಕ್ರಾಮಿಕ ರೋಗಗಳ ಹರಡುವಿಕೆ, ನಿಯಂತ್ರಣ ಮತ್ತು ಚಿಕಿತ್ಸೆ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಯೊಂದಿಗೆ ಸಾರ್ವಜನಿಕರ ಸಹಕಾರ ಮುಖ್ಯವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಡಾ.ಚನ್ನಪ್ಪ ಕಟ್ಟಿ ಹೇಳಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಂ–ಯುಕ್ತ ಆಶ್ರಯದಲ್ಲಿ ವಿಶ್ವ ಮಲೇರಿಯಾ ದಿನದ ಅಂಗವಾಗಿ ಇತ್ತಿಚಿಗೆ ಹಮ್ಮಿಕೊಂಡಿದ್ದ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯದಲ್ಲಿ 2027ರ ವೇಳೆಗೆ ಮಲೇ–ರಿಯಾ ನಿವಾರಣಾ ಗುರಿ ಹೊಂದಲಾಗಿದೆ. ಮಲೇ–ರಿಯಾ ರೋಗವು ಪ್ಲಾಸ್ಮೋಡಿಯಾ ಎಂಬ ಪರಾವಲಂಬಿ ಜೀವಿಯಿಂದ ಬರುತ್ತದೆ. ಅನಾಫಿಲೀಸ್ ಎಂಬ ಹೆಣ್ಣು ಸೊಳ್ಳೆ ಕಡಿತದಿಂದ ಈ ರೋಗ ಒಬ್ಬರಿಂದ ಒಬ್ಬ–ರಿಗೆ ಹರಡುತ್ತದೆ. ಈ ರೋಗ ಸಾಮಾನ್ಯವಾಗಿ ವರ್ಷದ ಎಲ್ಲ ಕಾಲದಲ್ಲೂ ಕಂಡು ಬಂದರೂ ಜೂನ್ ನಿಂದ ಅಕ್ಟೋಬರ್ ಅಂತ್ಯದವರೆಗಿನ ಮಳೆಗಾಲದಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ಈ ಸಮಯದಲ್ಲಿ ಕೆರೆ, ಕುಂಟೆ, ಬಾವಿ, ಸಣ್ಣಪುಟ್ಟ ತಗ್ಗು ಪ್ರದೇಶದಲ್ಲಿ ಮಳೆ ನೀರು ನಿಂತು ಸೊಳ್ಳೆಗಳ ವಂಶಾಭಿವೃದ್ದಿಗೆ ಅನುಕೂಲವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಹಾಗಾಗಿ ಗ್ರಾಮಂತರ ಮತ್ತು ಪಟ್ಟಣ ಪ್ರದೇಶಗಳ ಪರಿಸರದಲ್ಲಿ ಈ ರೋಗ ನಿಯಂತ್ರಣಕ್ಕೆ ಕ್ರಮ ಅಗತ್ಯ ಎಂದರು.

ಈ ವರ್ಷದ ಘೋಷವಾಕ್ಯದಂತೆ "ಮಲೇರಿಯಾ ಕೊನೆಗೊಳಿಸಲು ಅಗತ್ಯ ಕ್ರಮಗಳ ಚಾಲನೆಯನ್ನು ಈಗ ನಾವು ಮಾಡೋಣ ಹಾಗೂ ಮಲೇರಿಯಾ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸಂಪತ್ತಕುಮಾರ ಗುಣಾರಿ ಮಾತನಾಡಿ, ಮಲೇ–ರಿಯಾ ರೋಗದ ಖಚಿತ ಪ್ರಕರಣಗಳು ಬರದಂತೆ ನೋಡಿಕೊಳ್ಳುವುದು ತುಂಬಾ ಆಗತ್ಯವಾಗಿದೆ. ಕೆರೆ, ಬಾವಿಗಳಲ್ಲಿ ಮೀನು ಬಿಡುವುದು,ಚರಂಡಿಗಳ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ನೀರಿಗೆ ಕ್ಲೋರಿನೇಶನ್ ಮಾಡಿಸುವುದು. ಇದರಿಂದ ಸೊಳ್ಳೆಗಳ ಉತ್ಪತಿಯನ್ನುತಡೆಯಬಹುದು.ಮಳೆಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಬಿಟ್ಟು ಬಿಟ್ಟು ಮಳೆ ಬರುವುದರಿಂದ ಅಲ್ಲಿಲ್ಲಿ ನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗುತ್ತದೆ. ಹಾಗಾಗಿ ನೀರು ನಿಲ್ಲದಂತೆ ಮುಂಜಾಗ್ರತಾ ಕ್ರಮವಹಿಸಬೇಕು ಎಂದರು.ಮನೆಗಳಲ್ಲಿ ನೀರು ಶೇಖರಣೆ ಸಾಮಗ್ರಿಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಹಾಗೂ ನೀರು ತುಂಬಿಡುವ ಪರಿಕರಗಳನ್ನು ಗಾಳಿ ಆಡದಂತೆ ಭದ್ರವಾಗಿ ಮುಚ್ಚುವಂತೆ ಜಾಗೃತಿ ಮೂಡಿಸಬೇಕು ಹಾಗೂ ಆರೋಗ್ಯ ಶಿಕ್ಷಣ ನೀಡಬೇಕು ಎಂದರು.ಸ್ವಯಂ ರಕ್ಷಣೆ ವಿಧಾನಗಳಾದ ಸೊಳ್ಳೆ ಪರದೆ, ಸೊಳ್ಳೆ ಎತ್ತಿಗಳ ಉಪಯೋಗ ಮತ್ತು ಸಂಜೆ ಅಳವಡಿಸಬೇಕು. ಮನೆ ಸುತ್ತ–ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

## ಸಂಚಾರಿ ನಿಯಮಗಳನ್ನು ಉಲ್ಲಂಘಿ–ಸುವವರ ಮೇಲೆ ಕಲಬುರ್ಗಿಯಲ್ಲಿ ಎಐ ಆಧಾರಿತ ಕ್ಯಾಮೆರಾಗಳ ಹದ್ದಿನ ಕಣ್ಣು..!

ಕಲಬುರ್ಗಿ: ನಗರದಲ್ಲಿ ಸಂಚಾರ ನಿಯಮಗಳನ್ನು ಉಲ್ಲಂಘಿಸಿದವರ ಮೇಲೆ ಕಠಿಣ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸಾರ್ವಜನಿಕರು ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸುವ ಉದ್ದೇಶದಿಂದ ನಗರದ ವಿವಿಧೆಡೆ ಸುಮಾರು 58 ಸ್ಥಳಗಳಲ್ಲಿ 180 ಕ್ಯಾಮೆರಾಗಳನ್ನು ಅಳವಡಿಸಲಾಗಿದೆಹಾಗೂ ಎಐ ಆಧಾರಿತ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಹೇಳಿದರು.

ನಗರದ ತಮ್ಮ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಲ್ಮೆಟ್ ಧರಿಸದೇ ಇರುವುದು, ಟ್ರಿಪಲ್ ರೈಡಿಂಗ್, ಚಾಲನೆಯ ಸಂದರ್ಭದಲ್ಲಿ ಮೊಬೈಲ್ ಬಳಕೆ, ಸೀಟ್ ಬೆಲ್ಟ್ ಧರಿಸದೇ ಇರುವುದು, ನೋ ಪಾರ್ಕಿಂಗ್, ತಪ್ಪು ದಾರಿ, ಎಎನ್‌ಪಿಆರ್, ಎಫ್‌ಆರ್‌ಎಸ್ (ಮುಖ ಗುರುತಿಸುವಿಕೆ ವ್ಯವಸ್ಥೆ), ಲೈನ್ ಕ್ರಾಸಿಂಗ್ ಮುಂತಾದವುಗಳ ಮೇಲೆ ಎಐ ಆಧಾರಿತ ಕ್ಯಾಮೆರಾಗಳು ಕಣ್ಣಿಡುತ್ತವೆ ಎಂದರು.

ಎಐ ಆಧಾರಿತ ಪಾದಚಾರಿ ಎಚ್ಚರಿಕೆ ವ್ಯವಸ್ಥೆ ಕಲ್ಪಿಸಲಾಗಿದ್ದು ಈ ಮೂಲಕ ಸಾರ್ವಜನಿಕರು ಜಿಬ್ರಾ ಕ್ರಾಸ್ ಮಾಡುವಾಗ ಎಐ ಆಧಾರಿತ ಕ್ಯಾಮೆರಾಗಳು ಪಾದಚಾರಿಗಳಿಗೆ ಹಾಗೂ ಕಾರು ಚಾಲಕರಿಗೆ ಎಚ್ಚರಿಕೆ ನೀಡುತ್ತದೆ. ಕ್ರಾಸ್ ವಾಕ್ ವಲಯಕ್ಕೆ ಪ್ರವೇಶಿಸುವ ಪಾದಚಾರಿಗಳನ್ನು ಪತ್ತೆ ಮಾಡುತ್ತದೆ. ವೇಗದ ವಾಹನ ಚಾಲಕರಿಗೆ ಮಿನುಗುವ ಎಲ್‌ಇಡಿ ಸಂಕೇತಗಳು, ವಾಹನವು ಹೆಚ್ಚಿನ ವೇಗದಲ್ಲಿ ಬರುತ್ತಿದ್ದರೆ ಧ್ವನಿ ಮತ್ತು ದೃಶ್ಯ ಸಂಕೇತಗಳು, ನಿರಂತರ ಕಾರ್ಯಾಚರಣೆ, ರಾತ್ರಿ ದೃಷ್ಟಿ ಮತ್ತು ಹವಾಮಾನ ನಿರೋಧಕ ವಿನ್ಯಾಸವನ್ನು ಎಐ ದೃಷ್ಟಿ ಮಾಡ್ಯೂಲ್ ಹೊಂದಿದೆ ಎಂದು ಅವರು ವಿವರಿಸಿದರು.

ಒಬ್ಬ ವ್ಯಕ್ತಿ ಜಿಬ್ರಾ ಕ್ರಾಸ್ ಮಾಡುವಾಗ ಎಐ ಆಧಾರಿತ ಕ್ಯಾಮೆರಾಗಳು ಸುಮಾರು 500–700 ಮೀಟರ್ ದೂರ ಇರುವಾಗು ಕ್ರಾಸ್ ಮಾಡುವ ವ್ಯಕ್ತಿಗೆ ಹಾಗೂ ವಾಹನ ಚಾಲಕ ಇಬ್ಬರಿಗೂ ಲೈಟ್ ಬ್ಲಿಂಕ್ ಹಾಗೂ ಸಣ್ಣ ಧ್ವನಿಯಲ್ಲಿ ಸೈರನ್ ಹಾಕಿ ಎಚ್ಚರಿಕೆ ನೀಡುತ್ತದೆ. ಇದರಿಂದಾಗಿ ಸಂಚಾರ ಹರಿವು ಸುಧಾರಣೆ ಎಐ ಆಧಾರಿತ ಐಟಿಎಂಎಸ್ ಸಂಚಾರ ಸಂಕೇತಗಳು ಮತ್ತು ದಟ್ಟಣೆಯನ್ನು ಕ್ರಿಯಾತ್ಮಕವಾಗಿ ನಿರ್ವಹಿಸುತ್ತವೆ. ರಸ್ತೆ ಸುರಕ್ಷತೆ ಹೆಚ್ಚಳ ನೈಜ–ಸಮಯದ ಮೇಲ್ವಿಚಾರಣೆ ಉಲ್ಲಂಘನೆಗಳನ್ನು ಪತ್ತೆ ಮಾಡಿ ಅಪಘಾತಗಳನ್ನು ಕಡಿಮೆ ಮಾಡುತ್ತದೆ. ಸ್ವಯಂಚಾಲಿತ ಜಾರಿ ಕ್ಯಾಮೆರಾ ಮತ್ತು ಎಐ ವ್ಯವಸ್ಥೆಗಳು ಸ್ವಯಂಚಾಲಿತವಾಗಿ ಚಲನ್ಗಳನ್ನು ಉತ್ಪಾದಿಸುತ್ತವೆ ಎಂದು ಅವರು ಹೇಳಿದರು.

ಇಂತಹ ಕ್ರಮಗಳಿಂದ ಮಾನವ ಹಸ್ತಕ್ಷೇಪ ಕಡಿತ ಕೈಯಿಂದ ಸಂಚಾರ ನಿಯಂತ್ರಣದ ಅವಲಂಬನೆ ಕಡಿಮೆ. ಪಾರದರ್ಶಕತೆ ಪಕ್ಷಪಾತವಿಲ್ಲದ, ಸಾಕ್ಷಿ ಆಧಾರಿತ ಜಾರಿ. ನೈಜ–ಸಮಯ ಮೇಲ್ವಿಚಾರಣೆ ಮತ್ತು ನಿಯಂತ್ರಣ. ಡೇಟಾ ಆಧಾರಿತ ನಿರ್ಧಾರ ತೆಗೆದುಕೊಳ್ಳುವಿಕೆ ಉತ್ತಮ ನಗರ ಯೋಜನೆಗೆ ಸಹಾಯ. ತ್ವರಿತ ತುರ್ತು ಪ್ರತಿಕ್ರಿಯೆ, ಪರಿಸರ ಪ್ರಯೋಜನಗಳು ಇಂಧನ ಬಳಕೆ ಮತ್ತು ಹೊರಸೂಸುವಿಕೆ ಕಡಿತ. ಆದಾಯ, ಉತ್ಪಾದನೆ ದಂಡ ಸಂಗ್ರಹ ದಕ್ಷತೆ ಹೆಚ್ಚಳ. ಸ್ಮಾರ್ಟ್ ಸಿಟಿ ಯೋಜನೆಗಳೊಂದಿಗೆ ಏಕೀಕರಣ ಸಾಧ್ಯವಾಗಲಿದೆ ಎಂದು ಅವರು ತಿಳಿಸಿದರು.

# ಕೃಷಿಯಲ್ಲಿ ಹಸಿವಿದ್ದಾಗ ಒಕ್ಕಲುತನದಲ್ಲಿ ಪ್ರಗತಿ ಸಾಧ್ಯ

## ವಿಜಯಪುರದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಅಭಿಮತ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಒಕ್ಕಲುತನದ ಬಗ್ಗೆ ಹಸಿವು ಬೇಕು. ಹಸಿವು ಇದ್ದಾಗ ಒಕ್ಕಲುತನದಲ್ಲಿ ಪ್ರಗತಿ ಸಾಧ್ಯ ಎಂದು ಕೃಷಿ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯ ಹಾಗೂ ಜಿಲ್ಲಾ ಕೃಷಿಕ ಸಮಾಜದ ಸಹಯೋಗದಲ್ಲಿ ಗುರುವಾರ ಕೃಷಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ನಡೆದ ಪ್ರತಿ ಎಕರೆಗೆ 100 ಟನ್ ಕಬ್ಬು ಬೆಳೆಯುವುದು ಹೇಗೆ? ಎಂಬ ವಿಚಾರ ಸಂಕಿರಣವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಣ್ಣು ರೈತನ ಕಣ್ಣು ಹಾಗಾಗಿ ರೈತರು ಮಣ್ಣಿನ ಫಲವತ್ತತೆ ಕಾಯ್ದುಕೊಳ್ಳಬೇಕು ಎಂದ ಅವರು, ಮಣ್ಣಿನ ಪೋಷಕಾಂಶಗಳ ಹೇರಳವಾಗಿರುವಂತೆ ನೋಡಿಕೊಳ್ಳಬೇಕು ಎಂದರು.

**ಕಬ್ಬಿನ ಹೆಚ್ಚಿನ ಇಳುವರಿಗಾಗಿ**

ನಮ್ಮದು ಕಬ್ಬು ಬೆಳೆಯಲು ನಮ್ಮಲ್ಲಿನ ಮಣ್ಣು ಬಹು ಸೂಕ್ತವಾಗಿದೆ. ಮಣ್ಣಿನ ಸತ್ವ ನೋಡಿಕೊಂಡು ಕಬ್ಬಿನ ಸಾಲಿನಿಂದ ಸಾಲಿಗೆ ಇರುವ ಅಗಲ ಖಚಿತಗೊಳಿಸಿಕೊಳ್ಳಬೇಕು ಎಂದರು.

ಕಬ್ಬಿಗೆ ಅವಶ್ಯಕತೆ ಇರುವಷ್ಟು ನೀರು ನೀಡಬೇಕು. ಕಬ್ಬಿನ ಇಳುವ–ರಿಯಲ್ಲಿ ನೀರಿನ ಪಾತ್ರ ಬಹು ಮುಖ್ಯವಾಗಿದೆ. ಹನಿ ನೀರಾವರಿ ಅಳವಡಿಸಿಕೊಂಡು ಇಳುವರಿ ಹೆಚ್ಚಿಸಿಕೊಳ್ಳಬೇಕು ಎಂದರು.

ರೈತರಿಗಾಗಿ ತಾಂತ್ರಿಕ ಕಾರ್ಯಾಗಾರ ನಿಜವಾದ ಹಸಿವು ರೈತರಲ್ಲಿದೆ. ಈ ಕಾರ್ಯಾಗಾರಕ್ಕೆ ಬಹಳಷ್ಟು ಜನ ರೈತರು ಆಗಮಿಸಿ, ಇಲ್ಲಿನ ವಿಷಯ ತಜ್ಞರು ಮಂಡಿಸಿದ ವಿಷಯಗಳು ತಮ್ಮ ಕಬ್ಬು ಕೃಷಿಯಲ್ಲಿ ಬಳಕೆ ಮಾಡಿಕೊಂಡು ಕೃಷಿಯಲ್ಲಿ ಯಶಸ್ಸು ಕಾಣಬೇಕು ಎಂದರು.

ಬೆಳೆಯಲ್ಲಿ ವೈಜ್ಞಾನಿಕ ಜ್ಞಾನದ ಕೊರತೆಯಿಂದ ಇಳುವ–ರಿಯಲ್ಲಿ ಕೊರತೆ ಕಾಣಬಹುದಾಗಿದೆ. ಇದು ವಾಣಿಜ್ಯ ಬೆಳೆಯೂ ಹೌದು. ಇದು ವಾರ್ಷಿಕ ಬೆಳೆಯೂ ಆಗಿದೆ. ಪೂರಕ ವಾತಾವರಣ ಒದಗಿಸಿಕೊಟ್ಟು ಬೆಳೆಯಲ್ಲಿ ಇಳುವರಿ ಹೆಚ್ಚಿಸಿಕೊಳ್ಳಬಹುದಾಗಿದೆ. ಆಸಕ್ತಿ ಹೊಂದಿ, ಜ್ಞಾನಾರ್ಜನೆ ಹಳೆ ಅನುಭವಗಳೊಂದಿಗೆ ಹೊಸತನ ಮೈಗೂಡಿಸಿಕೊಂಡು ಕೃಷಿಯಲ್ಲಿ ಖುಷಿ ಕಾಣಬೇಕು ಎಂದು ಹೇಳಿದರು. ಕೊಯ್ಲೋತ್ತರ ನಿರ್ವಹಣೆ ವೈಜ್ಞಾನಿಕವಾಗಿ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾದ ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ಕಲ್ಲೋಳಿ ಗ್ರಾಮದ ಬಾಳಪ್ಪ ಬೆಳಕೋಡ, ಇಂಡಿ ತಾಲೂಕಿನ ಶ್ರೀಮಂತ ಇಂಡಿ ಹಾಗೂ ಗೋಳಸಂಗಿಯ ನಾರಾಯಣ ಸಾಲುಂಕೆ ಅವರು ಪ್ರತಿ ಎಕರೆಗೆ 100 ಟನ್ ಕಬ್ಬು ಬೆಳೆಯುವುದು ಹೇಗೆ?" ಎಂಬ ವಿಷಯದ ಕುರಿತು ತಮ್ಮ ಅನುಭವ ಹಂಚಿಕೊಂಡರು.

ಕೃಷಿ ಮಹಾವಿದ್ಯಾಲಯದ ಮುಖ್ಯ ಕೀಟ ತಜ್ಞ ಎ.ಪಿ.ಬಿರಾದಾರ ಅವರು ಕಬ್ಬು ಬೆಳೆಯಲ್ಲಿ ಕೀಟ ನಿರ್ವಹಣೆ ಕುರಿತು ಬಹು ಸೊಗಸಾಗಿ ರೈತರೊಂದಿಗೆ ವಿಷಯ ವಿನಿಮಯ ಮಾಡಿಕೊಂಡರು.

ಕಬ್ಬು ಬೆಳೆಗಾರರು ನಾಲ್ಕು ಪ್ರಮುಖ ಸಮಸ್ಯೆಗಳ ಬಗ್ಗೆ ಕೃಷಿ ತಜ್ಞರ ಎಚ್ಚರಿಕೆ ನೀಡಿದರು. ಕಬ್ಬು ಬೆಳೆಗಾರರನ್ನು ಕಾಡುತ್ತಿರುವ ನಾಲ್ಕು ಪ್ರಮುಖ ಸಮಸ್ಯೆಗಳ ಕುರಿತು ಮಾಹಿತಿ ನೀಡಿದ ಅವರು, ಕಬ್ಬಿನ ಇಳುವರಿ ಕುಸಿತಕ್ಕೆ ಕಾರಣವಾಗುತ್ತಿರುವ ಪ್ರಮುಖ ಕೀಟ ಹಾಗೂ ರೋಗಬಾಧೆಗಳ ಬಗ್ಗೆ ರೈತರು ಜಾಗೃತರಾಗಿರಬೇಕು ಎಂದರು.

ಸವಳು ಜವಳು ಸಮಸ್ಯೆ

ಮಣ್ಣಿನಲ್ಲಿ ಲವಣಾಂಶ ಹೆಚ್ಚಾಗುವುದು ಮತ್ತು ಅತಿಯಾದ ನೀರು ನಿಲ್ಲುವಿಕೆಯಿಂದ ಕಬ್ಬಿನ ಬೆಳವಣಿಗೆ ಕುಂಠಿತವಾಗುತ್ತಿದೆ. ಮಣ್ಣಿನ ಆರೋಗ್ಯ ಸುಧಾರಣೆಗೆ ರೈತರು ಗಮನ ಹರಿಸಬೇಕು.

**ಬಿಳಿ ಕಸ (ಉರಮಲ್ಲಿಗೆ):**

ಕಬ್ಬಿನ ಗದ್ದೆಗಳಲ್ಲಿ ಕಂಡುಬರುವ ಈ ಪರಾವಲಂಬಿ ಕಳೆ ಗಿಡವು ಕಬ್ಬಿನ ಸತ್ವವನ್ನು ಹೀರಿಕೊಳ್ಳುತ್ತದೆ. ಇದು ಇಳುವರಿಯ ಮೇಲೆ ಭಾರಿ ಹೊಡೆತ ನೀಡುತ್ತಿದೆ.

ಗೊಣ್ಣೆ ಹುಳು:

ಮಣ್ಣಿನ ಒಳಗಿರುವ ಈ ಹುಳುಗಳು ಕಬ್ಬಿನ ಬೇರುಗಳನ್ನು ತಿಂದು ಗಿಡವು ಒಣಗುವಂತೆ ಮಾಡುತ್ತವೆ. ಇದರ ಹತೋಟಿಗೆ ಸೂಕ್ತ ಕೀಟನಾಶಕಗಳ ಬಳಕೆ ಅಗತ್ಯ ಎಂದರು.

ಕಾಡಿಗೆ ರೋಗ:

ಈ ರೋಗವು ಕಬ್ಬಿನ ಸುಳಿಯಲ್ಲಿ ಕಪ್ಪು ಬಣ್ಣದ ಚಾಟಿಯಂತಹ ರಚನೆಯನ್ನು ಉಂಟುಮಾಡುತ್ತದೆ. ಇದು ಇಡೀ ಬೆಳೆಗೆ ಹರಡುವ ಸಾಧ್ಯತೆ ಇರುವುದರಿಂದ ಪೀಡಿತ ಗಿಡಗಳನ್ನು ತಕ್ಷಣವೇ ನಾಶಪಡಿಸಬೇಕು.

ತಜ್ಞರ ಸಲಹೆ:


ಈ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚಿ ಸೂಕ್ತ ಕ್ರಮ ಕೈಗೊಳ್ಳುವುದರಿಂದ ರೈತರು ನಷ್ಟದಿಂದ ಪಾರಾಗಬಹುದು. ಆಧು–ನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳುವಂತೆ ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳ ಮಾರ್ಗದರ್ಶನ ಪಡೆಯಬೇಕು ಎಂದರು.

ಕಳೆ ನಿರ್ವಹಣೆ, ಕೀಟ ಮತ್ತು ರೋಗಗಳ ನಿರ್ವಹಣೆ ಕು–ರಿತು ಸಮಗ್ರ ಮಾಹಿತಿ ನೀಡಿದರು. ಸುಳಿ ಕೊರೆಯುವ ಕೀಟ,ಬಿಳಿ ಉಣ್ಣೆ ,ಬಿಳಿ ನೊಣ,ಗೊಣ್ಣೆ ಹುಳ ಕೀಟ ಬಾಧೆಯ ನಿರ್ವಹಣೆ ಬಗ್ಗೆ ಮಾತನಾಡಿದರು.

ಸಂಕೇಶ್ವರದ ಕೃಷಿ ಸಂಶೋಧನಾ ಕೇಂದ್ರದ ಮುಖ್ಯ ವಿಜ್ಞಾನಿ ಡಾ. ಎಸ್.ಎಸ್.ನೂಲಿ ಅವರು ಕಬ್ಬಿನಲ್ಲಿ ಮಣ್ಣು ಪೋಷಕಾಂಶ ಹಾಗೂ ನೀರು ನಿರ್ವಹಣೆ ಕುರಿತು ಮಾತನಾಡಿದರು.

ಕಾರ್ಯಾಗಾರದಲ್ಲಿ ಉಪ ಕೃಷಿ ನಿರ್ದೇಶಕರಾದ ಶರಣಗೌಡ ಪಾಟೀಲ ಹಾಗೂ ಚಂದ್ರಕಾಂತ ಪವಾರ, ವಿಜಯಪುರದ ಸಹಾಯಕ ಕೃಷಿ ನಿರ್ದೇಶಕ ಮಂಜುನಾಥ ಜಾನಮಟ್ಟಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಶಿವನಗೌಡ ಬಿರಾದಾರ,ಎಸ್.ಬಿ ಜಗ್ಗಿನವರ, ಶಿವಪ್ಪಗೌಡ ಬಿರಾದಾರ, ಕೃಷಿಕ ಸಮಾಜದ ಸಿಂದಗಿ ತಾಲೂಕಾಧ್ಯಕ್ಷ, ಪ್ರಗತಿ ಪರ ರೈತರಾದ ಶ್ರೀಮಂತ ಇಂಡಿ, ಕೃಷಿ ಮಹಾವಿದ್ಯಾಲಯದ ವಿಜ್ಞಾನಿಗಳು, ರೈತರು ಉಪಸ್ಥಿತರಿದ್ದರು.

# ಪಾಲಕರೆ ನಿಮ್ಮ ಮಕ್ಕಳಿಗೆ ಹೆದರಿ..



■ ಉದಯರಶ್ಮಿ ದಿನಪತ್ರಿಕೆ

**ನಾವು - ನಮ್ಮವರು**

**(ಮಕ್ಕಳ ಪ್ರಗತಿಯಲ್ಲಿ ಪಾಲಕರ ಪಾತ್ರ ಕುರಿತ ಲೇಖನ ಮಾಲಿಕೆ)**

ಇದೇನಿದು! ಮಕ್ಕಳಿಗೆ ಪಾಲಕರು ಹೆದರಬೇಕೇ ಎಂದು ಸೋಜಿಗ ಪಡದಿರಿ. ಸಾಮಾನ್ಯವಾಗಿ ಮಕ್ಕಳು ತಮ್ಮ ಪಾಲಕರಿಗೆ ಹೆದರಬೇಕು ಎಂಬುದು ಲೋಕಾರೂಢಿ, ಆದರೆ ಪಾಲಕರೇ ಮಕ್ಕಳಿಗೆ ಹೆದರಬೇಕು ಎಂಬುದು ಆಧುನಿಕ ಪರಿಭಾಷೆ.

ಖಂಡಿತವಾಗಿಯೂ ಪಾಲಕರು ತಮ್ಮ ಮಕ್ಕಳಿಗೆ ಹೆದರಬೇಕು. ಯಾವ ಕಾರಣಕ್ಕಾಗಿ ಎಂಬುದನ್ನು ಹೇಳಿದರೆ ನೀವು ಕೂಡ ಈ ಮಾತುಗಳನ್ನು ಒಪ್ಪಿಕೊಳ್ಳುತ್ತೀರಿ.

ಕೆಲವೇ ವರ್ಷಗಳ ಹಿಂದೆ ನಮ್ಮ ತಂದೆ, ಚಿಕ್ಕಪ್ಪ, ದೊಡ್ಡಪ್ಪ ಮಾವ ಹೀಗೆ ದ್ವಿಚಕ್ರ ವಾಹನಗಳನ್ನು ಹೊಂದಿರುವವರು ತಲೆಗೆ ಹೆಲ್ಮೆಟ್ ಧರಿಸಿ ಸಂಚಾರಿ ನಿಯಮಗಳನ್ನು ಪಾಲಿಸುತ್ತಾ ವಾಹನಗಳನ್ನು ಚಲಾಯಿಸುತ್ತಿದ್ದರು ಎಂಬುದು ನಮಗೆ ನೆನಪಿದೆ. ಅಷ್ಟೇನೂ ವಾಹನ ದಟ್ಟಣೆ ಇಲ್ಲದ ಕಾಲದಲ್ಲಿಯೂ ಕೂಡ ಅವರು ಎಲ್ಲ ನಿಯಮಗಳನ್ನು ಪಾಲಿಸುತ್ತಿದ್ದರು. ಆದರೆ ಇಂದಿನ ವಿಪರೀತ ಸಂಚಾರ ದಟ್ಟಣೆಯ ಸಮಯದಲ್ಲಿಯೂ ಕೂಡ ನಾವು ಸಂಚಾರಿ ನಿಯಮಗಳನ್ನು ಅತ್ಯಂತ ಸುಲಭವಾಗಿ ಉಲ್ಲಂಘಿಸಿ ಮುನ್ನಡೆಯುತ್ತೇವೆ. ಸಂಚಾರ ನಿಯಮಗಳನ್ನು ಪಾಲಿಸುವ ಟ್ರಾಫಿಕ್ ಪೊಲೀಸರು ಖಳನಾಯಕರು ಎಂಬಂತೆ ವರ್ತಿಸುತ್ತೇವೆ. ನಮ್ಮದೇ ಅನುಕೂಲಕ್ಕಾಗಿ ಮಾಡಿರುವ ಸಂಚಾರಿ ನಿಯಮಗಳನ್ನು ಪಾಲಿಸುವ ಮೂಲಕ ನಮ್ಮ ವೈಯುಕ್ತಿಕ ಕಾಳಜಿ ಮಾಡಿಕೊಳ್ಳಲು ನಾವು ತಯಾರಿಲ್ಲ. ಕಾರಿನಲ್ಲಿ ಕುಳಿತಾಗ ಸೀಟ್ ಬೆಲ್ಟ್ ಧರಿಸಲು ಬಹಳಷ್ಟು ಜನ ಈಗಲೂ ಸಿದ್ದರಿಲ್ಲ.

ಕೇವಲ ಇಬ್ಬರು ಸವಾರರು ಬಳಸಬಹುದಾದ ದ್ವಿಚಕ್ರ ವಾಹನದಲ್ಲಿ ಮೂರಕ್ಕಿಂತ ಹೆಚ್ಚು ಜನರನ್ನು ಕುಳ್ಳಿರಿಸಿ ಕೊಂಡು ಇಂದಿನ ಪಾಲಕರು ವಾಹನ ಚಲಾಯಿಸುತ್ತಾರೆ.. ಇಂತಹವರು ತಮ್ಮ ಮಕ್ಕಳಿಗೆ ಯಾವ ರೀತಿಯ ಮೌಲ್ಯದ ಪಾಠವನ್ನು ಹೇಳಿಕೊಡುತ್ತಾರೆ. ಸಂಚಾರಿ ನಿಯಮದ ಅನುಸಾರ ಶಿರಸ್ತ್ರಾಣವನ್ನು ಕಡ್ಡಾಯವಾಗಿ ಧರಿಸಬೇಕು ಆದ–ರೆ ನಮ್ಮ ಪಾಲಕರು ಇಲ್ಲೇ ಅರ್ಧ ಕಿಲೋಮೀಟ–ರ್ ಹೋಗಿ ಬರುತ್ತೇನೆ ಅಷ್ಟಕ್ಕೇ ಹೆಲ್ಮೆಟ್ ಅವಶ್ಯಕತೆ ಇಲ್ಲ ಎಂದು ತಾವೇ ತೀರ್ಮಾನಿಸಿ ಸರಕಾರದ ನಿಯಮಾವಳಿಗಳಿಗೆ ಸಡ್ಡು ಹೊಡೆಯುತ್ತಾರೆ. ಇನ್ನು ವರ್ತುಲ ರಸ್ತೆಗಳಲ್ಲಿ ವರ್ತುಲವನ್ನು ಸುತ್ತು ಹಾಕಿ ಎಡಕ್ಕೆ ಇಲ್ಲವೇ ಬಲಕ್ಕೆ ತಿರುಗಬೇಕಾದ ಸಮಯದಲ್ಲಿ ವರ್ತುಲವನ್ನು ಸುತ್ತು ಹಾಕುವಲ್ಲಿ ಸಮಯವನ್ನು ವ್ಯರ್ಥ ಮಾಡುವುದು ಬೇಡ ಎಂದು ಹಾಗೆಯೇ ತಿರುಗಿಸಿಕೊಂಡು ಓಡುವ ಪಾಲಕರು ನಮ್ಮಲ್ಲಿದ್ದಾರೆ.

ಮತ್ತೆ ಕೆಲವರು ನೋ ಪಾರ್ಕಿಂಗ್ ಜಾಗದಲ್ಲಿಯೇ ವಾಹನಗಳನ್ನು ಬಿಟ್ಟು ಹೋಗುತ್ತಾರೆ.. ಹೀಗೆ ಮಾಡುವ ಮೂಲಕ ಪಾಲಕರು ತಮ್ಮ ಮಕ್ಕಳಿಗೆ ಯಾವ ಪಾಠಗಳನ್ನು, ಬದುಕಿನ ಮೌಲ್ಯಗಳನ್ನು ಕಲಿಸುತ್ತಾರೆ ಹೇಳಿ?

ಆದ್ದರಿಂದ ಪಾಲಕರೇ ನಿಮ್ಮ ಮಕ್ಕಳಿಗೆ ಹೆದರಿ ಸಂಚಾರಿ ನಿಯಮಗಳನ್ನು ಪಾಲಿಸಿ. ನಿಮ್ಮ ಮತ್ತು




ನಿಮ್ಮ ಕುಟುಂಬದ ಸುರಕ್ಷತೆಗಾಗಿ ಇದು ಅತ್ಯವಶ್ಯಕ.

ಇನ್ನು ಕೆಲವು ಪಾಲಕರು ದುಷ್ಟ ಚಟಗಳಿಗೆ ತಮ್ಮನ್ನು ತಾವು ಒಡ್ಡಿಕೊಂಡಿರುತ್ತಾರೆ. ನಿಮ್ಮ ಮಕ್ಕಳನ್ನು ಎತ್ತಿಕೊಂಡಾಗ ಆ ಮಕ್ಕಳು ನಿಮ್ಮ ಬಾಯಿಂದ ಹೊರಡುವ ದುರ್ನಾತವನ್ನು ಸಹಿಸದೆ ಮುಖ ಮುರಿಯುವುದನ್ನು ಪಾಲಕರು ಗಮನಿಸಲೇಬೇಕು. ಮಕ್ಕಳು ನಿಮ್ಮನ್ನು, ನಿಮ್ಮ ದುಶ್ಚಟಗಳನ್ನು ಗಮನಿಸುತ್ತಲೇ ಇರುತ್ತಾರೆ. ಪಾಲಕರೇ ನಿಮ್ಮ ಮಕ್ಕಳ ಮುಂದೆ ಅಪರಾಧಿ ಭಾವದಿಂದ ನಿಲ್ಲುವ ತಪ್ಪು ಮಾಡಬೇಡಿ.

ನಿಮ್ಮ ಮಕ್ಕಳಿಗೆ ಹೆದರಿ. ನಿಮ್ಮ ದುಶ್ಚಟಗಳಿಗೆ ಕಡಿವಾಣ ಹಾಕಿ.

ಮೂರನೆಯದಾಗಿ ಮನೆಯಲ್ಲಿ ಪಾಲಕರಾಗಿ ನಿಮ್ಮ ವರ್ತನೆ ಹೇಗಿರುತ್ತದೆ ಎಂಬುದನ್ನು ಮಕ್ಕಳು ಗಮನಿಸುತ್ತಿರುತ್ತಾರೆ. ಮನೆಯಲ್ಲಿ ನಿಮ್ಮ ಆಹಾರ ಪಾನೀಯಗಳ ನಿಯಮಿತತೆ, ನಿಮ್ಮ ಬಟ್ಟೆ ಬರೆಗಳ, ಉಡುಗೆ ತೊಡುಗೆಗಳಲ್ಲಿನ ಶಿಸ್ತು, ಸಮಯಕ್ಕೆ





ಸರಿಯಾಗಿ ನಿಮ್ಮ ಕೆಲಸ ಕಾರ್ಯಗಳಿಗೆ ತೆರಳಿ ಮರಳಿ ಮನೆಗೆ ಬರುವ ರೀತಿ ನೀತಿಗಳನ್ನು ಮಕ್ಕಳು ಗಮನಿಸುತ್ತಿರುತ್ತಾರೆ. ಊಟ ತಿಂಡಿಗಳನ್ನು ಸೇವಿಸುವಲ್ಲಿ ನೀವು ತೋರಿಸುವ ಶ್ರದ್ಧೆ, ಆರೋಗ್ಯದ ಕುರಿತು ನೀವು ವಹಿಸುವ ಕಾಳಜಿ, ಆರೋಗ್ಯವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ನೀವು ಮಾಡಬಹುದಾದ ವ್ಯಾಯಾಮ ನಡಿಗೆಗಳು ಹೀಗೆ ನಿಮ್ಮ ವ್ಯಕ್ತಿತ್ವದ ಒಟ್ಟು ಮೊತ್ತ ನಿಮ್ಮ ಮಕ್ಕಳ ಮೇಲೆ ಪರಿಣಾಮವನ್ನು ಬೀರುತ್ತದೆ. ಆದ್ದರಿಂದ ಪಾಲಕರೇ ಮನೆಯಲ್ಲಿ ನಿಮ್ಮ ವರ್ತನೆಯ ಕುರಿತು ಕಾಳಜಿ ವಹಿಸಿ. ನಿಮ್ಮ ಬೆನ್ನ ಹಿಂದೆಯೂ ನಿಮ್ಮನ್ನು ಪರೀಕ್ಷಾತ್ಮಕ ದೃಷ್ಟಿಯಿಂದ ನೋಡುವ ಪರೀಕ್ಷಿಸುವ ಕಣ್ಣುಗಳು ಸದಾ ಇರುತ್ತದೆ ಎಂಬುದರ ಕುರಿತು ನಿಮಗೆ ಖಂಡಿತವಾಗಿಯೂ ಭಯವಿರಲಿ.

ನಿಮ್ಮ ಮಕ್ಕಳು ಹೇಗಿರಬೇಕೆಂದು ನೀವು ಬಯಸುವಿರೋ ಹಾಗೆಯೇ ನಿಮ್ಮ ಮಕ್ಕಳ ಮುಂದೆ ಪಾಲಕರಾಗಿ ನೀವು ವರ್ತಿಸಿ. ಮಕ್ಕಳ ಮುಂದೆ ನಾಯಿ ಬೆಕ್ಕುಗಳಂತೆ ಕಚ್ಚಾಡುವ, ಜಗಳವಾಡುವ, ಕೆಟ್ಟ ಮಾತುಗಳನ್ನ ಆಡುವ, ದೈಹಿಕವಾಗಿ ಹಲ್ಲೆ ಮಾಡುವ ಪಾಲಕರೇ ನಿಮ್ಮ ಮಕ್ಕಳು ಮುಂದೆ ಖಂಡಿತವಾಗಿಯೂ ನಿಮ್ಮನ್ನು ಅನುಕರಿಸುತ್ತಾರೆ ಎಂಬ ಹೆದರಿಕೆ ನಿಮಗಿರಲಿ.

ನಾವು ಉಸಿರಾಡುವ ಗಾಳಿ, ಕುಡಿಯುವ ನೀರು, ಸೇವಿಸುವ ಆಹಾರ ಕೇವಲ ನಮ್ಮ ಸ್ವತ್ತಲ್ಲ ಇವುಗಳನ್ನು ಸರಿಯಾಗಿ ಬಳಕೆ ಮಾಡುವ ಕರ್ತವ್ಯ ಮತ್ತು ಜವಾಬ್ದಾರಿಗಳು ನಮ್ಮವು. ಒಂದು ಅಂ–ದಾಜಿನ ಪ್ರಕಾರ ಪ್ರತಿದಿನ ಬೆಂಗಳೂರಿನಂತಹ ಮಹಾನಗರಗಳಲ್ಲಿ ಐದು ಟನ್ ಗಿಂತಲೂ ಹೆಚ್ಚಿನ



ಆಹಾರ ಪೋಲಾಗಿ ಕಸದ ತೊಟ್ಟಿಯನ್ನು ಇಲ್ಲವೇ ಚರಂಡಿಯನ್ನು ಸೇರುತ್ತದೆ.

ಆಹಾರಕ್ಕೆ ನೀಡುವ ಹಣ ನಿಮ್ಮದಾದರೂ ಆಹಾರವಾಗಿ ಬಳಕೆಯಾಗುವ ಸಂಪನ್ಮೂಲ ನಮ್ಮ ನಾಡಿನದು. ಈ ಸಂಪನ್ಮೂಲಗಳನ್ನು ಬಳಸುವ ಮತ್ತು ಉಳಿಸುವ ಹಕ್ಕು ನಮ್ಮದೇ ಹೊರತು ಪೋಲು ಮಾಡುವುದಲ್ಲ ಎಂಬ ಅರಿವು ನಮ್ಮಲ್ಲಿ ಇರಬೇಕು.

ಮನೆಯಲ್ಲಿ ಅನವಶ್ಯಕವಾಗಿ ನೀರನ್ನು ಹರಿಬಿಟ್ಟು ಪೋಲು ಮಾಡಬಾರದು. ಅನವಶ್ಯಕವಾಗಿ ಲೈಟು ಮತ್ತು ಫ್ಯಾನುಗಳನ್ನು ಹಾಕುವುದರಲ್ಲಿ ಅರ್ಥವಿಲ್ಲ. ನಾವು ಸಂಪನ್ಮೂಲಗಳನ್ನು ಉತ್ಪಾದಿಸುವುದಿಲ್ಲ ಆದ್ದರಿಂದ ಅವುಗಳನ್ನು ಪೋಲು ಮಾಡುವ ಅಧಿಕಾರವೂ ನಮಗಿಲ್ಲ.

ಇನ್ನು ಮಕ್ಕಳನ್ನು ಹೊರಗೆ ಸುತ್ತಾಡಲು ಕರೆದೊಯ್ದಾಗ ಅವರಿಗೆ ಹಸಿವಾದಾಗ ತಿನ್ನಲು ಕೊಡುವ ಬಿಸ್ಕತ್ತಿನ ಪೊಟ್ಟಣವನ್ನಾಗಲಿ ಚಿಪ್ಸ್ ನ ಪ್ಯಾಕೆಟ್ ಇರಲಿ ಅದನ್ನು ಎಲ್ಲಿ ಬೇಕೆಂದರಲ್ಲಿ ಎಸೆಯದೆ ಕಸದ ಬುಟ್ಟಿಯಲ್ಲಿ ಹಾಕುವ ರೂಢಿ ಮಾಡಿಕೊಳ್ಳಲೇಬೇಕು. ಹಾಗೆ ಅವುಗಳನ್ನು ಎಸೆಯಲು ಯಾವುದೇ ಕಸದ ಬುಟ್ಟಿಗಳು ದೊರೆಯದೆ ಇದ್ದ ಪಕ್ಷದಲ್ಲಿ ತಮ್ಮ ಬ್ಯಾಗುಗಳಲ್ಲಿ ತೆಗೆದು ಇಟ್ಟುಕೊಂಡು ನಂತರ ಸೂಕ್ತವಾಗಿ ವಿಲೇವಾರಿ ಮಾಡಬೇಕು.

ಅವಿದ್ಯಾವಂತರನ್ನು ಬಿಡಿ, ಸಾಕಷ್ಟು ಜನ ವಿದ್ಯಾವಂತ ಪಾಲಕರು ರಸ್ತೆ ನಿಯಮಗಳನ್ನು ಪಾಲಿಸುವುದಿಲ್ಲ, ಸಾಮಾಜಿಕ ನಿಯಮಗಳನ್ನು ಗಾಳಿಗೆ ತೂರಿ ನಡೆಯುತ್ತಾರೆ. ಮುಗಿದುಹೋಗುವ ಸಂಪನ್ಮೂಲಗಳನ್ನು ಬೇಕಾಬಿಟ್ಟಿಯಾಗಿ ಬಳಸುತ್ತಾರೆ.. ಇದು ನಮ್ಮ ಬೇಜಾವಾಬ್ದಾರಿತನವನ್ನು ನಿರ್ಲಕ್ಷವನ್ನು ತೋರುತ್ತದೆ. ನಮ್ಮ ಮುಂದಿನ ಪೀಳಿಗೆಗೆ ನಾವು ಏನನ್ನಾದರೂ ಬಿಟ್ಟು ಹೋಗಬೇಕು ಎನ್ನುವುದಾದರೆ ಅದು ನಿಯಮಗಳನ್ನು ಪಾಲಿಸುವ ಮೂಲಕ ನಮ್ಮ ಸಾಮಾಜಿಕ ಜವಾಬ್ದಾರಿಯ ಪರಿಪೂರ್ಣ ವ್ಯಕ್ತಿತ್ವವುಳ್ಳ ಪಾಲಕತ್ವವನ್ನು.

ಎಲ್ಲ ನಿಯಮಗಳು ಪಾಲಿಸಲು ಸಾಧ್ಯವಾಗಿರುವಂಥವು. ಯಾವೊಂದು ನಿಯಮವನ್ನು ನಾವು ಉಲ್ಲಂಘಿಸದೆ ವೈಯಕ್ತಿಕವಾಗಿ ಕೌಟುಂಬಿಕವಾಗಿ ಮತ್ತು ಸಾಮಾಜಿಕವಾಗಿ ನಾಗರಿಕ ಪ್ರಜ್ಞೆಯುಳ್ಳ ವ್ಯಕ್ತಿಗಳಾಗಿ ನಮ್ಮ ನಮ್ಮ ಜವಾಬ್ದಾ–ರಿಗಳನ್ನು ಅರಿತು ಅವುಗಳನ್ನು ಪರಿಪಾಲಿಸುವ ಮೂಲಕ ನಮ್ಮ ಮಕ್ಕಳ ಗೌರವಕ್ಕೆ ಪಾತ್ರರಾಗಬೇಕು. ಮಕ್ಕಳಿಗೆ ಆದರ್ಶ ಮಾದರಿಯಾಗಬೇಕು.

ಮನೆಯಲ್ಲಿ ಪಾಲಕರು ಜೋರಾಗಿ ಕಿರುಚಾಡದೆ ಜಗಳವಾಡದೆ ಸಾಮರಸ್ಯದಿಂದ ಬದುಕನ್ನು ಸಾಗಿಸಬೇಕು. ಪಾಲಕರ ಜೋರು ಬಾಯಿ, ಒರಟು ಮಾತುಕತೆಗಳು ಮಕ್ಕಳ ಮನಸ್ಸಿನ ಮೇಲೆ ಅಗಾಧ ಪರಿಣಾಮವನ್ನು ಬೀರುತ್ತವೆ , ಪಾಲಕರ ನಡುವಿನ ಸಂಬಂಧದ ವಿಷಮತೆ ಮಕ್ಕಳ ಮೇಲೆ ವ್ಯತಿರಿಕ್ತ ಪರಿಣಾಮವನ್ನು ಬೀರುತ್ತದೆ. ಮಕ್ಕಳು ಆರೋಗ್ಯಕರ ವಾತಾವರಣದಲ್ಲಿ ಬೆಳೆದಾಗ ಅವರಲ್ಲಿ ಒಳ್ಳೆಯ ಸ್ನೇಹ ಭಾವ,ತಾಳ್ಮೆ ಮತ್ತು ಶ್ರದ್ದೆಗಳು ಒಡ ಮೂಡುತ್ತವೆ.

ಆದ್ದರಿಂದ ಒಳ್ಳೆಯ ನಡವಳಿಕೆಯುಳ್ಳ ನಾಗ–ರಿಕರನ್ನು ಈ ಸಮಾಜಕ್ಕೆ ಅರ್ಪಿಸುವ ನಿಟ್ಟಿನಲ್ಲಿ ನೀವು ಮೊದಲು ಬದಲಾಗಿ ನಿಮ್ಮ ಮಕ್ಕಳಿಗೆ ಮಾದರಿ ವ್ಯಕ್ತಿಗಳಾಗಿ.



ಲೇಖನ
■ ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ
ಗದಗ ಜಿಲ್ಲೆ

# ಹಳ್ಳಗಳಿಗೆ ನೀರು ತುಂಬಿಸುವ ಯೋಜನೆ ಇಡೀ ದೇಶಕ್ಕೆ ಮಾದರಿ

## ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಬೋಸರಾಜು ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ಜಿಲ್ಲೆಯ ಹಳ್ಳಗಳಿಗೆ ನೀರು ತುಂಬಿಸುವ ಯೋಜನೆ ಸಣ್ಣ ನೀರಾವರಿ ಕ್ಷೇತ್ರದಲ್ಲಿ ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಬೋಸರಾಜು ಹೇಳಿದ್ದಾರೆ.



ಶುಕ್ರವಾರ ತಿಕೋಟಾ ತಾಲೂಕಿನ ಬರಟಗಿ ಗ್ರಾಮದಲ್ಲಿ ತೊರವಿ, ಭೂತನಾಳ, ಇಟ್ಟಂಗಿಹಾಳ, ವಿಠ್ಠಲವಾಡಿ, ಯತ್ನಾಳ, ಅರಕೇರಿ, ಸಿದ್ದಾಪೂರ, ಅರಕೇರಿ, ಜಾಲಗೇರಿ ಹಳ್ಳಗಳಿಗೆ ಅಡ್ಡಲಾಗಿ ಚೆಕ್ ಡ್ಯಾಂ ಮತ್ತು ರಿಚಾರ್ಜ್ ಶಾಫ್ಟ್ ಗಳನ್ನು ನಿರ್ಮಾಣ ಮಾಡುವ ಮೂಲಕ ಅಂತರ್ಜಲ ಅಭಿವೃದ್ಧಿ ಪಡಿಸುವ ಅಂದಾಜು ರೂ. 734.63 ಲಕ್ಷ ವೆಚ್ಚದ ಕಾಮಗಾರಿಗೆ ಭೂಮಿಪೂಜೆ ಹಾಗೂ 2025–26ನೇ ವರ್ಷದ ಬರಟಗಿ ತಾಂಡಾ–3(ಜಾಧವ ನಗರ)ದಲ್ಲಿ ರೂ.50 ಲಕ್ಷ ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಶಾಸಕರಾಗಿದ್ದಾಗ ಕೆರೆಗೆ ನೀರು ತುಂಬಿಸುವ ಯೋಜನೆ ರೂಪಿಸಿ ನೀರಾವರಿ ಸಚಿವರಾಗಿ ಆ ಯೋಜನೆಯನ್ನು ಸಮರ್ಪಕವಾಗಿ ಜಾರಿ ಮಾಡುವ ಮೂಲಕ ಎಂ. ಬಿ. ಪಾಟೀಲರು ಜಲಕ್ರಾಂತಿ ಮಾಡಿದ್ದಾರೆ. ಈಗ ವ್ಯರ್ಥವಾಗಿ ಹರಿಯುವ ನೀರನ್ನು ಸದ್ಬಳಕೆ ಮಾಡಲು ಹಳ್ಳಗಳನ್ನು ತುಂಬಿಸುವ ಮೂಲಕ ವಿಜಯಪುರ ಜಿಲ್ಲೆಯಲ್ಲಿ ಸುಮಾರು 400 ಕಿ. ಮೀ. ವ್ಯಾಪ್ತಿಯಲ್ಲಿ ಅಂತರ್ಜಲ ಹೆಚ್ಚಿಸುವ ಮಹತ್ವದ ಯೋಜನೆ ರೂಪಿಸಿದ್ದಾರೆ. ಇಡೀ ದೇಶಕ್ಕೆ ಮಾದರಿಯಾದ ಈ ಯೋಜನೆ ರೂಪಿಸಿರುವ ಸಚಿವರ ಮಾರ್ಗದರ್ಶನದಲ್ಲಿ ನಾನೂ ಕೂಡ ಕೆರೆಗೆ ತುಂಬಿಸುವ ಮತ್ತು ಹಳ್ಳಗಳನ್ನು ತುಂಬಿಸುವ ಕೆಲಸ ಮಾಡಿಸುತ್ತಿದ್ದೇನೆ. ನಮ್ಮ ಜಿಲ್ಲೆಯಲ್ಲಿ ನಾವು ಮಾಡದ ಕೆಲಸವನ್ನು ಅವರು ಇಲ್ಲಿ ಮಾಡುತ್ತಿರುವ ಕೆಲಸ ಶ್ಲಾಘನೀಯ ಎಂದು ಅವರು ಹೇಳಿದರು.

ಜಾತಿ ಅನ್ನ ಕೊಡಲ್ಲ. ಕೆಲಸ ಮಾಡುವವರಿಗೆ ಬೆಂಬಲಿಸಿದರೆ ಇನ್ನೂ ಹೆಚ್ಚಿನ ಅಭಿವೃದ್ಧಿ ಸಾಧ್ಯವಾಗುತ್ತದೆ. ಉತ್ತರ ಕರ್ನಾಟಕದ ಅಭಿವೃದ್ಧಿ ವಿಷಯದಲ್ಲಿ ಗಟ್ಟಿಯಾಗಿ ಧ್ವನಿ ಎತ್ತುತ್ತಾರೆ. ಕೈಗಾರಿಕೆ ಸಚಿವರಾದ ಮೇಲೆ ಉತ್ತರ ಕರ್ನಾಟಕಕ್ಕೂ ಅಪಾರ ಕೊಡುಗೆ ನೀಡಿದ್ದಾರೆ. ಅವರಿಗೆ ಶಕ್ತಿ ತಬುವ ಕೆಲಸವನ್ನು ನಾವೆಲ್ಲರೂ ಮಾಡೋಣ ಎಂದು ಸಚಿವ ಎನ್. ಎಸ್. ಬೋಸರಾಜು ಹೇಳಿದರು.

ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಮಾತನಾಡಿ, 176 ಹಳ್ಳಗಳಿಗೆ ಮಳೆಗಾಲದಲ್ಲಿ ಕಾಲುವೆಗಳ ಮೂಲಕ ನೀರು ತುಂಬಿಸಲಾಗುವುದು. ಇದರಿಂದ 400 ಕಿ. ಮೀ. ವ್ಯಾಪ್ತಿಯಲ್ಲಿ ಅಂತರ್ಜಲ ಹೆಚ್ಚಾಗಲಿದೆ. ನಮ್ಮ ವಿಜಯಪುರ ಜಿಲ್ಲೆಯ 27 ಪ್ಯಾಕೇಜ್ ಮೂಲಕ ಯೋಜನೆ ಜಾರಿಗೆ ಸುಮಾರು ರೂ. 270 ಕೋ. ವೆಚ್ಚದ ಕಾಮಗಾರಿಗೆ ಒಪ್ಪಿಗೆ ನೀಡುವ ಮೂಲಕ ಸಚಿವ ಎನ್. ಎಸ್. ಬೋಸರಾಜು ನಮಗೆ ಸಹಾಯ ಮಾಡಿದ್ದು, ಅವರಿಗೆ ಅಭಾರಿಯಾಗಿದ್ದೇನೆ. ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸನಗೌಡ ಪಾಟೀಲ, ಗ್ಯಾರಂಟಿ ಯೋಜನೆ ಅನುಷ್ಠಾನ ತಾಲೂಕು ಸಮಿತಿ ಅಧ್ಯಕ್ಷ ಗುರುಪಾದಗೌಡ ದಾಶ್ಯಾಳ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದು ಗೌಡನವರ, ಮುಖಂಡರಾದ ಸಿದ್ದನಗೌಡ ಪಾಟೀಲ, ಬಾಳಾಸಾಹೇಬ ಪಾಟೀಲ, ಪೀರಪಟೇಲ ಪಾಟೀಲ, ಪದ್ದು ಚವ್ಹಾಣ, ಡಿ ಎಲ್. ಚವ್ಹಾಣ, ಗೋವಿಂದ ಶಿಂಧೆ, ಸತೀಶ ನಾಯಕ, ದತ್ತಾ ಕಾಟಕರ, ಧನರಾಜ ಪತ್ತಾರ, ಸುಭಾಸ ರಜಪೂತ, ವಿಜಯಸಿಂಗ ರಜಪೂತ, ಕಾಂತುಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

# ಪ್ರಗತಿಯಲ್ಲಿರುವ ನೀರಾವರಿ ಯೋಜನೆಗಳು ಬೇಗ ಪೂರ್ಣಗೊಳಿಸಲು ಸೂಚನೆ

## ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪ್ರಗತಿಯಲ್ಲಿರುವ ನೀರಾವರಿ ಯೋಜನೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಅವರು ಶುಕ್ರವಾರ ಬಬಲೇಶ್ವರ ತಾಲೂಕಿನ ತಿಗಣಿ ಬಿದರಿಯಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಕಾಖಂಡಕಿ– ಮಮದಾಪುರ, ಬಬಲೇಶ್ವರ–ಯಕ್ಕುಂಡಿ, ಕಾಖಂಡಕಿ– ತೊನಶ್ಯಾಳ ಹಾಗೂ ತಿಗಣಿ ಬಿದರಿ ಹಳ್ಳಗಳಿಗೆ ಅಡ್ಡಲಾಗಿ ಸರಣಿ ಚೆಕ್ ಡ್ಯಾಂ ಮತ್ತು ರಿಚಾರ್ಜ್ ಶಾಫ್ಟ್ ಗಳ ನಿರ್ಮಾಣ ಮಾಡುವ ಮೂಲಕ ಅಂತರ್ಜಲ ಅಭಿವೃದ್ಧಿ ಪಡಿಸುವ ಅಂದಾಜು ರೂ. 984 ಲಕ್ಷ ಮೌಲ್ಯದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ನೀರು ಬಳಕೆದಾರರ ಸಂಘ ರಚಿಸುವ ಮೂಲಕ ನೀರು ಬಳಕೆಯಲ್ಲಿ ಶಿಸ್ತು ತರಲು ಕ್ರಮ ಕೈಗೊಳ್ಳಲಾಗುವುದು. ಇದರಿಂದ ಕಾಲುವೆಯ ಕೊನೆಯ ಭಾಗದವರೆಗೂ ನೀರು ತಲುಪಲು ಅನುಕೂಲವಾಗಲಿದೆ. ಇದರ ಜೊತೆಗೆ ಈಗ ಕೈಗೆತ್ತಿಕೊಳ್ಳಲಾಗಿರುವ ಹಳ್ಳಗಳನ್ನು ತುಂಬಿಸುವ ಯೋಜನೆಯಿಂದ ಅಂತರ್ಜಲ ಮತ್ತಷ್ಟು ಹೆಚ್ಚಾಗಲಿದೆ. ಕಾಲುವೆಗಳ ವ್ಯಾಪ್ತಿಯಲ್ಲಿ ಬರುವ 178 ಹಳ್ಳಗಳಿಗೆ ಎಸ್ಕೇಪ್ ಮೂಲಕ ನೀರು ಹರಿಸಲಾಗುವುದು. ಪ್ರತಿ ಕಿಲೋ ಮೀಟರ್ ಗೊಂದರಂತೆ ಚೆಕ್ ಡ್ಯಾಂ ನಿರ್ಮಾಣದಿಂದ ಸುಮಾರು 400 ಕಿ. ಮೀ. ವ್ಯಾಪ್ತಿಯಲ್ಲಿ ಅಂತರ್ಜಲ ವೃದ್ಧಿಸಿ ಬೇಸಿಗೆಯಲ್ಲಿ ನೀರಿನ ಸಮಸ್ಯೆಗೆ ಸೂಕ್ತ ಪರಿಹಾರ ಸಿಗಲಿದೆ. ಹಳ್ಳಗಳ ಒತ್ತುವರಿ ತೆರವಿಗೆ ರೈತರು ಕೈ ಜೋಡಿಸಬೇಕು. ಸರಣಿಯಲ್ಲಿ ಬರುವ ಪ್ರತಿಯೊಂದು ಚೆಕ್ ಡ್ಯಾಂಗೆ ನೀರು ತಲುಪುವಂತಾಗಬೇಕು ಎಂದು ಅವರು ಹೇಳಿದರು.

ಹಳ್ಳಗಳನ್ನು ತುಂಬಿಸುವ ಯೋಜನೆ ಪೂರ್ಣವಾದ ನಂತರ ವಿಜಯಪುರ ದೇಶದಲ್ಲಿಯೇ ಅತೀ ಹೆಚ್ಚು ಅಂತರ್ಜಲ ಹೊಂದಿರುವ ಜಿಲ್ಲೆಯಾಗಲಿದೆ. ಇದರ ಜೊತೆಗೆ ಹೈನುಗಾರಿಕೆಗೆ ಪ್ರೋತ್ಸಾಹ ನೀಡಿ ರೈತರ ಆರ್ಥಿಕತೆ ಸುಧಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಸ್ಮಾರ್ಟ್ ಕ್ಲಾಸ್ ಒದಗಿಸಲಾಗುತ್ತಿದ್ದು, ಯುವಕರಿಗೆ ಹೈಟೆಕ್ ಜಿಮ್ ಪ್ರಾರಂಭಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಸಚಿವ ಎಂ. ಬಿ. ಪಾಟೀಲ ತಿಳಿಸಿದರು.

ಕೆಎಂಎಫ್ ಮಾಜಿ ಅಧ್ಯಕ್ಷ ಶ್ರೀಶೈಲಗೌಡ ಪಾಟೀಲನಿಡೋಣಿ ಮಾತನಾಡಿ, ಬರದನಾಡನ್ನು ಹಸಿರು ಬೀಡನ್ನಾಗಿ ಮಾಡಿರುವ ಸಚಿವ ಎಂ. ಬಿ. ಪಾಟೀಲರು ನಮ್ಮ ಪಾಲಿಗೆ ಅನ್ನದಾತರಾಗಿದ್ದಾರೆ. ರೈತರು ಕಾಲುವೆಗಳನ್ನು ಸಂರಕ್ಷಿಸುವ ಮೂಲಕ ನೀರು ಹಳ್ಳಗಳ ಕೊನೆಯಂಚಿನವರೆಗೆ ತಲುಪಲು ಕೈಜೋಡಿಸಬೇಕು ಎಂದು ಹೇಳಿದರು.

ಮುಖಂಡ ಚನ್ನಪ್ಪ ಕೊಪ್ಪದ ಮಾತನಾಡಿ, ಜಿಲ್ಲೆಗೆ ಅಂಟಿದ್ದ ಬರದ ನಾಡು ಹೆಸರನ್ನು ನೀರಾವರಿ ಮೂಲಕ ಅಳಿಸಿ ಹಾಕಿದ್ದಾರೆ. ಜಿಲ್ಲೆಯನ್ನು ನಂದನವನವನ್ನಾಗಿ ಮಾಡಿದ್ದಾರೆ. ಈಗ ಶಾಲೆಗಳ ಅಭಿವೃದ್ಧಿ, ರಸ್ತೆಗಳ ಸುಧಾರಣೆ ಮೂಲಕ ಅಭಿವೃದ್ಧಿಗೆ ವೇಗ ನೀಡಿದ್ದಾರೆ. ಎಲ್ಲರೂ ಸದಾ ಅವರ ಕೈ ಬಲಪಡಿಸಬೇಕು ಎಂದು ಹೇಳಿದರು.

ಜಿ. ಪಂ. ಮಾಜಿ ಅಧ್ಯಕ್ಷ ವಿ. ಎಸ್. ಪಾಟೀಲ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಬಬಲೇಶ್ವರ ತಾಲೂಕು ಅಧ್ಯಕ್ಷ ಮಲ್ಲಪ್ಪ ದಳವಾಯಿ ಮಾತನಾಡಿ, ನೀರಾವರಿ ಯೋಜನೆ ಜಾರಿಗೆ ಸಚಿವ ಎಂ. ಬಿ. ಪಾಟೀಲರು ವಹಿಸಿರುವ ಶ್ರಮ, ರೈತರು, ಕೂಲಿ ಕಾರ್ಮಿಕರು, ಬಡಮಕ್ಕಳ ಭವಿಷ್ಯವನ್ನು ಅಭಿವೃದ್ಧಿಯ ಮೂಲಕ ಹಸನು ಮಾಡಿದ ಯಶೋಗಾಥೆಯನ್ನು ವಿವರಿಸಿದರು.

ಎಂಜಿನಿಯರ್ ವಿಶ್ವನಾಥ ಪೀರಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಯೋಜನೆಯ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಈರಗೊಂಡ ಬಿರಾದಾರ, ಮುಖಂಡತಾದ ನಾಗರಾಜ ಕುಲಕರ್ಣಿ, ಪ್ರಭುಗೌಡ ಪಾಟೀಲ, ಬಾಬುಗೌಡ ಪಾಟೀಲ, ಅಶೋಕ ಕಾಖಂಡಕಿ, ಮುದಕನಗೌಡ ಪಾಟೀಲ, ಜಕ್ಕಪ್ಪ ಎಡವೆ, ರಫೀಕ್ ಸೋನಾರ, ಮಹೇಶ ಮಾಳಿ, ಪರಶು ಬಡಗಾರ, ರಜಾಕ ದಳವಾಯಿ, ಲಾಲಸಾಬ್ ಕಮತೆ, ಮಾಳಪ್ಪ ಜಲ್ಲೆ, ವಿನಾಯಕ ಕೊಟ್ಟಲಗಿ, ವಿದ್ಯಾರಾಣಿ ತುಂಗಳ, ಕಾವ್ಯ ಪಡತಾರೆ, ಉಮ್ಮಯ್ಯಾ ಹಿರೇಮಠ, ದಾನಮ್ಮ ಜಿರಲಿ, ಸಣ್ಣ ನೀರಾವರಿ ಮತ್ತು ಅಂತರ್ಹಲ ಅಭಿವೃದ್ಧಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ವಿಜಯ ವಸ್ತ್ರದ, ಗ್ರಾಮದ ಹಿರಿಯರು, ಮಹಿಳೆಯರು, ಯುವಕರು ಉಪಸ್ಥಿತರಿದ್ದರು.

ಗಣೇಶ ಮಾಳಿ ಸ್ವಾಗತಿಸಿದರು. ಭೀಮರಾವ ಶಿಂಧೆ ನಿರೂಪಿಸಿರು. ವಜೀರ ಆಲಗೂರ ವಂದಿಸಿದರು.

# ಕನ್ನಡ ಸಾಹಿತ್ಯ ಲೋಕಕ್ಕೆ ಡಾ.ಚನ್ನಪ್ಪ ಕಟ್ಟಿ ಕೊಡುಗೆ ಅನನ್ಯ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಆಂಗ್ಲ ಪ್ರಾಧ್ಯಾಪಕರರಾಗಿ ಕನ್ನಡ ಸಾಹಿತ್ಯ ಲೋಕಕ್ಕೆ ಡಾ.ಚನ್ನಪ್ಪ ಕಟ್ಟಿ ಅವರ ಕೊಡುಗೆ ಅನನ್ಯ. ಕಥೆ, ಕಾವ್ಯ, ಸಂಶೋಧನೆ, ಜೀವನ ಚರಿತ್ರೆ ಮತ್ತು ಅನುವಾದದ ಮೂಲಕ ಸಾಹಿತ್ಯದ ಕೃಷಿಯನ್ನು ಮಾಡಿ ಅಮೋಘ ಸಾಧನೆ ಮಾಡಿದ್ದಾರೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಹೇಳಿದರು.

ನಗರದ ವಿಜಯಪುರ ರಸ್ತೆಯಲ್ಲಿರುವ ಮಾಂಗಲ್ಯ ಭವನದಲ್ಲಿ ಸಿಂದಗಿಯ ಡಾ.ಚನ್ನಪ್ಪ ಕಟ್ಟಿ ಅಭಿನಂದನ ಸಮಿತಿ ಹಮ್ಮಿಕೊಂಡ ಅಭಿನಂದನ ಸಮಾರಂಭ ನೆಲೆ ಅಭಿನಂದನಾ ಗ್ರಂಥ ಬಿಡುಗಡೆ ಹಾಗೂ ವಿಚಾರ ಸಂಕಿರಣ ಕಾರ್ಯಕ್ರಮದ ಮುಖ್ಯ ಅತಿಥಿ ಸ್ಥಾನ ವಹಿಸಿ ಅವರು ಮಾತನಾಡಿದರು.

ಡಾ.ಚನ್ನಪ್ಪ ಕಟ್ಟಿ ಅವರ ಅವಿರತ ಪರಿಶ್ರಮದಿಂದಲೇ ಇಂದು ಅವರಿಗೆ ಕುವೆಂಪು ಭಾಷಾಭಾರತಿ ಪ್ರಾಧಿಕಾರದ ಅಧ್ಯಕ್ಷರಾಗಿ ಸೇವೆ ಒದಗಿ ಬಂದಿದ್ದು ಸಿಂದಗಿ ನೆಲೆಗೆ ಹೆಮ್ಮೆಯ ಗರಿ. ಒಟ್ಟಿನಲ್ಲಿ ಡಾ.ಚನ್ನಪ್ಪ ಕಟ್ಟಿ ಅವರ ಬದುಕು, ಬರಹ ಮತ್ತು ಆಡಳಿತ ಕಾರ್ಯವೈಖರಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಲೋಕದ ಗರಿಮೆಯನ್ನು ಹೆಚ್ಚಿಸಿದ್ದಾರೆ ಎಂದರು.

ಈ ವೇಳೆ ನೆಲೆ ಅಭಿನಂದನ ಗ್ರಂಥವನ್ನು ಬಿಡುಗಡೆಗೊಳಿಸಿದ ಬೆಂಗಳೂರಿನ ಸಂಸ್ಕೃತಿ ಚಿಂತಕ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್.ಜಿ.ಸಿದ್ದರಾಮಯ್ಯ ಮಾತನಾಡಿ, ನೆಲೆ ಎನ್ನುವ ಹೆಸರೇ ಚನ್ನಪ್ಪ ಕಟ್ಟಿ ಅವರ ಅಸ್ಮಿತೆ. ಅವರ ಇಡೀ ಬದುಕು ಮತ್ತು ಸಾಹಿತ್ಯ ಚಟುವಟಿಕೆಗೆ ಒಂದು ನೆಲೆ ಸಿಕ್ಕಿರುವುದೇ ಈ ನೆಲೆ ಎನ್ನುವ ಶಬ್ದ ಅವರ ವ್ಯಕ್ತಿತ್ವದ ಗುಣವಾಗಿದೆ. ಸ್ವಹಿತ ಮತ್ತು ಸಮಾಜ ಹಿತಕ್ಕಾಗಿ ಕಾರ್ಯ ಮಾಡಿದಾಗ ಮಾತ್ರ ಅದು ಸತ್ಯ ಶುದ್ಧ ಕಾಯಕ. 5 ಭಾಗಗಳಾಗಿ ಈ ಕೃತಿಯನ್ನು ರಚನೆ ಮಾಡಲಾಗಿದೆ. ಇದು ನೆಲೆ 100ರೊಳಗಿನ ಒಂದಲ್ಲ. ಇದೊಂದು ವಿಶೇಷ ಅಭಿನಂದನಾ ಗ್ರಂಥವಾಗಿದೆ. ಅಕ್ಷರ ಮಾಧ್ಯಮ ಆಚೆಗಿನ ಮಾತುಗಳನ್ನು ಕಥೆಯ ರೂಪದಲ್ಲಿ ತರಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ವಿಜಯಪುರದ ಫ.ಗು.ಹಳಕಟ್ಟಿ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ.ಎಂ.ಎಸ್.ಮದಭಾವಿ ಅಭಿನಂದನಾ ನುಡಿಗಳನ್ನಾಡಿದರು. ಡಾ.ಅರವಿಂದ ಮನಗೂಳಿ ಹಾಗೂ ಅಭಿನಂದನ ಗ್ರಂಥದ ಗೌರವ ಸಂಪಾದಕ ಡಾ.ಶ್ರೀರಾಮ ಇಟ್ಟಣ್ಣವರ ಮತ್ತು ಮಾಜಿ ವಿಪ ಸದಸ್ಯ ಅರುಣ ಶಹಾಪುರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂಗಮೇಶ ಮೇತ್ರಿ ಸಂಪಾದಿಸಿದ ಅಮೋಘಸಿದ್ಧ ಜನಪದ ಮಹಾಕಾವ್ಯ ಸಾಂಸ್ಕೃತಿಕ ಮುಖಾಮುಖಿ ಗ್ರಂಥವನ್ನು ಮಾಜಿ ಶಾಸಕ ರಮೇಶ ಭೂಸನೂರ ಮತ್ತು ಚನ್ನಪ್ಪ ಕಟ್ಟಿ ಅವರ ವಿಮರ್ಶಾ ಸಂಕಲನ ಒಕ್ಕಣೆಯನ್ನು ವಿಪ ಮಾಜಿ ಸದಸ್ಯ ಅರುಣ ಶಹಾಪೂರ ಬಿಡುಗಡೆಗೊಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ರಾಷ್ಟ್ರೀಯ ಅಧ್ಯಕ್ಷರು, ಸಾರಂಗಮಠದ ಪೀಠಾಧಿಪತಿ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು, ಸಮ್ಮುಖವನ್ನು ಹಾಲುಮತ ಗುರುಪೀಠ ಅಗತೀಥರ್ದ ಸರೂರದ ರೇವಣಸಿದ್ದೇಶ್ವರ ಶಾಂತಮಯ ಮಹಾಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿದರು.

ಸಮಾರಂಭದಲ್ಲಿ ವಿಜಯಪುರ ಲೋಕಾಯುಕ್ತ ಎಸ್‌ಪಿ ಟಿ.ಮಲ್ಲೇಶ, ಪ್ರಧಾನ ಸಂಪಾದಕ ಡಾ.ಎಂ.ಎಂ.ಪಡಶೆಟ್ಟಿ, ಡಾ.ಸಂಗಮೇಶ ಮೇತ್ರಿ, ಡಾ.ಚನ್ನಪ್ಪ ಕಟ್ಟಿ, ಪತ್ನಿ ಸರೋಜಾ ಕಟ್ಟಿ, ಎಂ.ಎಸ್.ಹೈಯ್ಯಾಳಕರ, ಶಿವಪ್ಪ ಗವಸಾಯಿ, ಬಿ.ಎಸ್.ಹಣಮಶೆಟ್ಟಿ, ಚಿದಂಬರ ಬಂಡಗಾರ, ಡಾ.ರವಿ. ಗೋಲಾ, ಡಾ.ಶರಣಬಸವ ಜೋಗುರ, ಶಿವಾನಂದ ಕಲಬುರ್ಗಿ ಸೇರಿದಂತೆ ಅವರ ಗೆಳೆಯರ ಬಳಗ, ಶಿಷ್ಯ ಬಗಳ ಭಾಗವಹಿಸಿದ್ದರು.

ಡಾ.ಚನ್ನಪ್ಪ ಕಟ್ಟಿ ಸಾಹಿತ್ಯ ಮುಖಾಮುಖಿ ವಿಚಾರ ಸಂಕಿರಣ

ಕಾರ್ಯಕ್ರಮಕ್ಕೂ ಪೂರ್ವದಲ್ಲಿ ಬೆಳಿಗ್ಗೆ 10ಗಂಟೆಗೆ ಡಾ.ಚನ್ನಪ್ಪ ಕಟ್ಟಿ ಸಾಹಿತ್ಯ ಮುಖಾಮುಖಿ ವಿಚಾರ ಸಂಕಿರಣವನ್ನು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಮಕ್ಕಳ ಸಾಹಿತಿಗಳಾದ ಹ.ಮ.ಪೂಜಾರ ಉದ್ಘಾಟಿಸಿದರು. ಅಧ್ಯಕ್ಷತೆಯನ್ನು ಅಥಣಿಯ ಕತೆಗಾರ ಕಾದಂಬರಿಕಾರ ಡಾ.ಬಾಳಾಸಾಹೇಬ ಲೋಕಾಪುರ ಅವರು ಡಾ.ಚನ್ನಪ್ಪ ಕಟ್ಟಿ ಅವರ ಕತೆಯ ಕುರಿತು ಮಾತನಾಡಿದರು. ಬೆಂಗಳೂರಿನ ವಿಮರ್ಶಕಿ ಎನ್.ಆರ್.ಲಲಿತಾಂಬಾ ಕಟ್ಟಿ ಅವರ ಕಾವ್ಯ ಕುರಿತು, ತಿಪಟೂರಿನ ಅನುವಾದಕ ಬರಹಗಾರ ಎಸ್. ಗಂಗಾಧರಯ್ಯ ಅನುವಾದ ಕುರಿತು, ಹಂಪಿ ಕನ್ನಡ ವಿಶ್ವವಿದ್ಯಾಯದ ಸಂಶೋಧಕ

ಡಾ.ಎಫ್.ಟಿ.ಹಳ್ಳಿಕೇರಿ ಅವರು ಕಟ್ಟಿ ಸಂಶೋಧನೆ ಕುರಿತಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ವಿಜಯಪುರದ ಚಾಣಕ್ಯ ಕರಿಯರ ಅಕಾಡೆಮಿ ಸಂಸ್ಥಾಪಕ ಎನ್.ಎಂ.ಬಿರಾದಾರ ಸೇರಿದಂತೆ ಇತರರು ಇದ್ದರು.

"ಸಿಂದಗಿ ನಗರದಲ್ಲಿ ಬೀದಿಯುದ್ಧಕ್ಕೂ ರಸ್ತೆ ಗುಂಡಿ, ಕಸ ಹಾಗೆಯೇ ಇದೆ. ಇದೆಲ್ಲವನ್ನು ಬರುವ ಸಮಯದಲ್ಲಿ ನಾನು ಗಮನಿಸಿದ್ದೇನೆ. ಇದರಿಂದ ನಗರವು ಅಶುಚಿತ್ವ ಮತ್ತು ಗುಂಡಿಗಳಿಂದ ಕೂಡಿದೆ ಎಂದು ತಿಳಿಯುತ್ತದೆ. ಇದರ ಕುರಿತಾಗಿ ತಾಲೂಕು ದಂಡಾಧಿಕಾರಿ ಹಾಗೂ ಪೌರಾಯುಕ್ತರಿಗೆ ಕ್ರಮಕೈಗೊಳ್ಳುವಂತೆ ಮೇಲಾಧಿಕಾರಿಗಳಿಗೆ ಸೂಚಿಸುತ್ತೇನೆ."

■ ಬಿ.ಎಸ್.ಪಾಟೀಲ
ಲೋಕಾಯುಕ್ತ ನ್ಯಾಯಮೂರ್ತಿಗಳು







## ಶ್ರೀ ಬಿ.ಎಂ.ಪಾಟೀಲ ಪಬ್ಲಿಕ್ ಸ್ಕೂಲ್‌ಗೆ ಮೊದಲ ಮೂರು ರ‍್ಯಾಂಕ್

ವಿಜಯಪುರ: ಐ.ಸಿ.ಎಸ್.ಇ 10ನೇ ತರಗತಿ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದಲ್ಲಿ ಮೊದಲ ಮೂರು ರ‍್ಯಾಂಕ್ ಗಳಿಸುವ ಮೂಲಕ ಕೀರ್ತಿ ತಂದಿದ್ದಾರೆ. ಗುರುವಾರ ಫಲಿತಾಂಶ ಪ್ರಕಟವಾಗಿದ್ದು, ಶಾಲೆಯು ಶೇ.100 ರಷ್ಟು ಫಲಿತಾಂಶ ದಾಖಲಿಸಿದೆ. ಶಾಲೆಯ ವಿದ್ಯಾರ್ಥಿಗಳಾದ ಗೌರಿ ಪಾಟೀಲ ಮತ್ತು ಸೂಫಿಯಾನ್ ಕಂದಗಲ ತಲಾ ಶೇ. 93.20 ಅಂಕ ಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಆದೇ ರೀತಿ ಪ್ರೇಕ್ಷಾ ಪಾಟೀಲ ಶೇ. 90.60 ಅಂಕ ಗಳಿಸಿ ದ್ವಿತೀಯ ಮತ್ತು ಮಲ್ಲಿಕಾರ್ಜುನ ಬಿರಾದಾರ ಶೇ. 89.80 ಅಂಕ ಗಳಿಸಿ ಜಿಲ್ಲೆಗೆ ತೃತೀಯ ಸ್ಥಾನ ಗಳಿಸಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ, ವಿಧಾನ ಪರಿಷತ ಶಾಸಕ ಮತ್ತು ಪ್ರಧಾನ ಕಾರ್ಯದರ್ಶಿ ಸುನೀಲಗೌಡ ಪಾಟೀಲ, ಶಾಲೆಯ ಕೋ– ಆರ್ಡಿನೇಟರ್ ಜಯಾ ಗಲಗಲಿ ಸಂತಸ ವ್ಯಕ್ತಪಡಿಸಿದ್ದು, ಅಭಿನಂದನೆ ಸಲ್ಲಿಸಿದ್ದಾರೆ.

(ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ)
ಕಾರ್ಯನಿರ್ವಾಹಕ ಅಭಿಯಂತರವರ ಕಾರ್ಯಾಲಯ,
ಪಂಚಾಯತ್‌ರಾಜ್ ಇಂಜಿನೀಯರಿಂಗ್ ವಿಭಾಗ, ವಿಜಯಪುರ
Tel.No.08352-277816, Fax No.08352-277817,
E-mail:zpebjp9@yahoo.co.in

ಸಂಖ್ಯೆ:ಕಾಇಂ/ಪಂ.ರಾ.ಇ.ವಿ/ವಿಜ/ಇಪ್ರಾ/ಟೆಂಡರ್/2026–27 ದಿನಾಂಕ:24.04.2026

ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ಕಾರ್ಯನಿರ್ವಾಹಕ ಇಂಜಿನೀಯರರು, ಪಂ.ರಾ.ಇಂ. ವಿಭಾಗ, ವಿಜಯಪುರ ಇವರು 2022–23ನೇ ಸಾಲಿನ ಹಾಗೂ 2025–26ನೇ ಸಾಲಿನ ವಿವಿಧ ಅನುದಾನ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಗುತ್ತಿಗೆದಾರರ 1 ಕಾಮಗಾರಿ (ಇಂಡೆಂಟ್ ನಂ. RDPR/2026-27/BD/WORK_INDENT26181) ಹೀಗೆ ಒಟ್ಟು 1 ಕಾಮಗಾರಿಗಳಿಗೆ ರೂ.16.17 ಲಕ್ಷದವರೆಗೆ ಕೆ.ಡಬ್ಲ್ಯೂ–1 ಪ್ರಕಾರ ಈ ಕಚೇರಿಯ ಟೆಂಡರ ಪ್ರಕಟಣೆ ಸಂಖ್ಯೆ:249 ದಿನಾಂಕ:24.04.2026 ರಂತೆ ಕಾಮಗಾರಿಗಳನ್ನು ಇ–ಟೆಂಡರ್‌ನ್ನು ಆಹ್ವಾನಿಸಿದ್ದು, ಕೆ.ಪಿ.ಪಿ. ಪೋರ್ಟಲ್ ಮುಖಾಂತರ ಟೆಂಡರನ್ನು ಸಲ್ಲಿಸಲು ಕೊನೆಯ ದಿನಾಂಕ:02.05.2026 ಸಾಯಂಕಾಲ 5.30 ಗಂಟೆಯವರೆಗೆ ಮಾತ್ರ ನಿಗದಿಪಡಿಸಿರುತ್ತದೆ.

ಟೆಂಡರಿನ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: https://kppp.karnataka.gov.in ನಲ್ಲಿ ಅಥವಾ ಕಛೇರಿ ಸಮಯದಲ್ಲಿ ಸದರಿ ವಿಭಾಗ ಕಾರ್ಯಾಲಯಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬಹುದು.

ಸಹಿ/– ಕಾರ್ಯನಿರ್ವಾಹಕ ಇಂಜಿನೀಯರರು,
ಪಂ.ರಾ.ಇಂ. ವಿಭಾಗ, ವಿಜಯಪುರ

ವಾಸಾಇ/ವಿಜಯಪುರ/ಆರ್.ಓ.ಸಂಖ್ಯೆ62/ಕೆ.ಎಸ್.ಎಂ.ಸಿ.ಎ/2026–27

## ಕಾರ್ಮಿಕ ಭವನ ನಿರ್ಮಾಣಕ್ಕೆ ಒತ್ತಾಯ

ಬೀದರ್: ನಗರದಲ್ಲಿ ಮಾದರಿ ಕಾರ್ಮಿಕ ಭವನ ನಿರ್ಮಾಣ ಮಾಡಬೇಕು ಎಂದು ಚಂದ್ರ ಸಾಂಸ್ಕೃತಿಕ, ಸಾಹಿತ್ತಿಕ ಹಾಗೂ ಶೈಕ್ಷಣಿಕ ಚಾರಿಟಬಲ್ ಟ್ರಸ್ಟ್ ಒತ್ತಾಯಿಸಿದೆ.

ಟ್ರಸ್ಟ್ ಅಧ್ಯಕ್ಷ ಪ್ರವೀಣ ಚಂದ್ರ, ಪ್ರಧಾನ ಕಾರ್ಯದರ್ಶಿ ಪ್ರದೀಪ್ ಚಂದ್ರ ಹಾಗೂ ಸದಸ್ಯ ಅಶೋಕ ಮೇತ್ರೆ ಅವರು ನಗರದಲ್ಲಿ ಈ ಕುರಿತು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರಿಗೆ ಬುಧವಾರ ಮನವಿ ಪತ್ರ ಸಲ್ಲಿಸಿದರು.

# ಭಕ್ತಿಸಾಗರದಲ್ಲಿ ತೇಲಿದ ಚಿಕ್ಕಪಡಸಲಗಿ ಭಕ್ತವೃಂದ

■ ಉದಯರಶ್ಮಿ ದಿನಪತ್ರಿಕೆ




## ಸಂಭ್ರಮದ ಶರಣಬಸವೇಶ್ವರ ಸಿದ್ಧಲಿಂಗೇಶ್ವರರ ರಥೋತ್ಸವ

ಜಮಖಂಡಿ: ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ಐತಿಹಾಸಿಕ ಕಮರಿಮಠದಲ್ಲಿ ಶರಣಬಸವೇಶ್ವರ ಹಾಗೂ ಸಿದ್ಧಲಿಂಗೇಶ್ವರ ಮಹಾರಾಜರ ವೈಭವಮಯ ರಥೋತ್ಸವ ಶುಕ್ರವಾರ ಸಂಜೆ ಅಪಾರ ಭಕ್ತರ ಸಮ್ಮುಖದಲ್ಲಿ ಭಕ್ತಿಭಾವದಿಂದ ಹಾಗೂ ಸಂಭ್ರಮ ಸಡಗರದ ನಡುವೆ ನೆರವೇರಿತು.

ಹಳಿಂಗಳಿಯ ಪೂಜ್ಯ ಶಿವಾನಂದ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯ ಮತ್ತು ನೇತೃತ್ವದಲ್ಲಿ ನಡೆದ ಈ ಮಹೋತ್ಸವ ಗ್ರಾಮದಲ್ಲಿ ಧಾರ್ಮಿಕ ವಾತಾವರಣವನ್ನು ನಿರ್ಮಿಸಿತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿದ ರಥೋತ್ಸವದಲ್ಲಿ ಸಾವಿರಾರು ಭಕ್ತರು ಭಾಗವಹಿಸಿ "ಶರಣಬಸವೇಶ್ವರ ಮಹಾರಾಜರಿಗೇ ಜಯ", "ಸಿದ್ಧಲಿಂಗೇಶ್ವರ ಮಹಾರಾಜರಿಗೇ ಜಯ" ಎಂಬ ಘೋಷಣೆಗಳನ್ನು ಕೂಗಿ ಭಕ್ತಿ ಪರವಶತೆಯನ್ನು ವ್ಯಕ್ತಪಡಿಸಿದರು. ವಿಶೇಷವಾಗಿ ಹೂವುಗಳು, ತೆಂಗಿನಕಾಯಿ, ಬಾಳೆಹಣ್ಣು, ಬಣ್ಣಬಣ್ಣದ ವಿದ್ಯುತ್ ದೀಪಗಳು ಹಾಗೂ ಸಾಂಪ್ರದಾಯಿಕ ಅಲಂಕಾರಗಳಿಂದ ಸಿಂಗರಿಸಲಾದ ರಥ ಭಕ್ತರ ಗಮನ ಸೆಳೆಯಿತು. ರಥದ ಸುತ್ತಲೂ ಅಲಂಕೃತ ದೀಪಾಲಂಕಾರ ಕಂಗೊಳಿಸುತ್ತಿದ್ದು, ಗ್ರಾಮೋತ್ಸವದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿತು.

ರಥೋತ್ಸವದ ಸಂದರ್ಭದಲ್ಲಿ ಭಕ್ತರು ಬೆಂಡು, ಬೆತ್ತಾಸು, ಕಾರಿಖ್ ಸೇರಿದಂತೆ ವಿವಿಧ ಪೂಜಾ ಸಾಮಗ್ರಿಗಳನ್ನು ರಥಕ್ಕೆ ಅರ್ಪಿಸಿ ತಮ್ಮ ಭಕ್ತಿಯನ್ನು ವ್ಯಕ್ತಪಡಿಸಿದರು. ಚೀನಿಕೋಲು, ಕರಡಿ ಮಜಲು, ಡೊಳ್ಳು ಹಾಗೂ ವಿವಿಧ ಸಾಂಪ್ರದಾಯಿಕ ವಾದ್ಯಗಳ ನಾದ ಗ್ರಾಮದೆಲ್ಲೆಡೆ ಮೊಳಗಿದ್ದು, ಉತ್ಸವಕ್ಕೆ ವಿಶೇಷ ಮೆರುಗು ನೀಡಿತು. ಯುವಕರು ಉತ್ಸಾಹದಿಂದ ರಥ ಎಳೆಯುವ ಮೂಲಕ ಸೇವಾಭಾವ ಪ್ರದರ್ಶಿಸಿದರು. ಮಹಿಳೆಯರು ಮಂಗಳಾರತಿ ನೆರವೇರಿಸಿ ದೇವರ ಕೃಪೆಗೆ ಪ್ರಾರ್ಥಿಸಿದರು.

ಚಿಕ್ಕಪಡಸಲಗಿ, ಆಲಗೂರ, ಕವಟಗಿ, ಜನವಾಡ, ಬಿದರಿ, ನಾಗನೂರು, ಹಿರೇಪಡಸಲಗಿ ಸೇರಿದಂತೆ ಸುತ್ತಮುತ್ತಲಿನ ಅನೇಕ ಗ್ರಾಮಗಳಿಂದ ಭಕ್ತರು ಆಗಮಿಸಿ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

ಗ್ರಾಮದಲ್ಲಿ ಭಕ್ತರಿಗಾಗಿ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿದ್ದು, ದಿನವಿಡೀ ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು.

ಇದಕ್ಕೂ ಮುನ್ನ ಬೆಳಿಗ್ಗೆ ಸಿದ್ಧಲಿಂಗೇಶ್ವರ ಮಹಾರಾಜರ ಅಡ್ಡಪಲ್ಲಕ್ಕಿ ಉತ್ಸವ ಹಾಗೂ ಶರಣಬಸವೇಶ್ವರ ಮಹಾರಾಜರ ತೊಟ್ಟಿಲು ತೂಗುವ (ನಾಮಕರಣ) ಕಾರ್ಯಕ್ರಮಗಳು ಭಕ್ತಿಪೂರ್ವಕವಾಗಿ ನಡೆದವು. ವಿವಿಧ ಧಾರ್ಮಿಕ ವಿಧಿವಿಧಾನಗಳು, ಪೂಜೆ, ಭಜನೆ ಹಾಗೂ ಮಂಗಳಾರತಿ ಕಾರ್ಯಕ್ರಮಗಳು ನಡೆದವು. ಮಠದ ಪೂಜ್ಯರು ಹಾಗೂ ಭಕ್ತರು ಸೇರಿ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ರಾವತಪ್ಪ ಕಲ್ಯಾಣಿ, ಸುರೇಶ ದಾನಗೌಡ, ಮಹಾದೇವ ಕಲ್ಯಾಣಿ, ಲಕ್ಷ್ಮಣ ಕಲ್ಯಾಣಿ, ಸಿದ್ದು ಜಂಗಮಶೆಟ್ಟಿ, ಅಡಿವೇಪ್ಪ ಅಂಬಲರ್ಝೇರಿ, ಪ್ರಭು ಬೋದ್ಲಿ, ಜೈಪಾಲ್ ಹೊಸಮನಿ, ಸದಾಶಿವ ಕಲ್ಯಾಣಿ, ಮಲ್ಲಯ್ಯ ಹಿರೇಮಠ, ಹನಮಂತ ತೇಲಿ ಯಲ್ಲಾಲಿಂಗ ಅಡಿಹುಡಿ ಸದಾಶಿವ ಕಲ್ಯಾಣಿ ಸದಾಶಿವ ಅಡಿಹುಡಿ ಅಯ್ಯಪ್ಪ ಮಠಪತಿ, ಸಿದ್ಧಲಿಂಗ ಹಿರೇಮಠ, ಸಿದ್ರಾಮ ಇಟ್ಟಿ, ಶ್ರೀಶೈಲ ಪಟ್ಟಣಶೆಟ್ಟಿ, ಪ್ರವೀಣ ನಾವಿ ಸೇರಿದಂತೆ ಅನೇಕರು ಭಾಗವಹಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR